# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 301 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:26–06–2025 ಗುರುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 301 | RNI No: KARKAN/2023/88462 | KA/SK/CTA-874/2024-2026 | Chitradurga | Date: 26-06-2025 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕರುಣೆ, ಸಹಾನುಭೂತಿ ಮತ್ತು ಸಮಾಜ ಸೇವೆಯ ಸಂಕೇತವಾಗಿದೆ: ಸ್ವಾಮೀಜಿ 2

ಚಿತ್ರದುರ್ಗ ಜಿಲ್ಲೆಯಲ್ಲಿಯೇ ಹೊಸದುರ್ಗ ಡಿಜಿಟಲೀಕರಣದಲ್ಲಿ ಪ್ರಥಮ 3

ಲೋಕ ಅದಾಲತ್, ಮಾದಕ ವಸ್ತು ಸಾಗಣೆ ತಡೆಗೆ ಸ್ಕ್ಯಾನರ್ ಅಳವಡಿಕೆಗೆ ಚಿಂತನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 2 ದಿನ ವಿಚಾರ ಸಂಕಿರಣ, ಬಯಲಾಟ ಪ್ರದರ್ಶನ

» ಚಿತ್ರದುರ್ಗ

ಕರ್ನಾಟಕ ಬಯಲಾಟ ಅಕಾಡೆಮಿ, ಹಂಪಿ ಕನ್ನಡ ವಿಶ್ವವಿದ್ಯಾಲಯ ನಾಟಕ ವಿಭಾಗದ ಸಂಯುಕ್ತ ಆಶ್ರಯದಲ್ಲಿ "ಕರ್ನಾಟಕ ಬಯಲಾಟಗಳ ಸಂಶೋಧನೆ: ಹೊಸ ಸಾಧ್ಯತೆಗಳು" ಎರಡು ದಿನಗಳ ವಿಚಾರ ಸಂಕಿರಣ ಮತ್ತು ಬಯಲಾಟ ಪ್ರದರ್ಶನವನ್ನು ಇದೇ ಜೂನ್ 30 ಹಾಗೂ ಜುಲೈ 01ರಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಭುವನ ವಿಜಯದಲ್ಲಿ ಹಮ್ಮಿಕೊಳ್ಳಲಾಗಿದೆ. ಗೋಷ್ಠಿ–1 ಮಧ್ಯಾಹ್ನ 12.30ಕ್ಕೆ ಕರ್ನಾಟಕ ಬಯಲಾಟ ಪ್ರಕಾರಗಳು: ಪ್ರಾದೇಶಿಕ ನೋಟ ಕುರಿತು ಡಾ.ಜಾಜಿ ದೇವೆಂದ್ರಪ್ಪ ಮಾತನಾಡುವರು. ಬಯಲಾಟ ಸಂಶೋಧನೆ: ತಾತ್ವಿಕ ನೆಲೆ ಕುರಿತು ಡಾ.ಅರುಣ್ ಜೋಳದ ಕೂಡ್ಲಿಗಿ ಮಾತನಾಡುವರು. ಗೋಷ್ಠಿ–2 ಮಧ್ಯಾಹ್ನ 2.30 ರಿಂದ 4 ರವರೆಗೆ ಬಯಲಾಟ : ಸಾಹಿತ್ಯಿಕ ಅಧ್ಯಯನ ಕುರಿತು ಚಂದ್ರಪ್ಪ ಸೊಬಟಿ, ಬಯಲಾಟ ಕಥೆಗಳು: ಪ್ರದರ್ಶನ ಸಿದ್ಧಾಂತದ ನೆಲೆ ಕುರಿತು ಡಾ.ಹಜರತ್ ಹು ನದಾಫ್, ಬಯಲಾಟ ಹಸ್ತ ಪ್ರತಿಗಳ ಸಂಗ್ರಹ, ಸಂಪಾದನೆ ಕುರಿತು ಡಾ.ವೀರೇಶ ಬಡಿಗೇರ ಮಾಡುವರು. ಸಂಜೆ 4.15 ರಿಂದ 5.30 ರವರೆಗೆ ವಿಜಯಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕು ರಬಿನಾಳದ ಶ್ರೀ ಬಸವೇಶ್ವರ ಬೈಲಾಟಗಳ ಕಲಾವಿದರ ಸಂಘದ ವತಿಯಿಂದ ಶ್ರೀ ಕೃಷ್ಣ ಪರಿಜಾತ ಬಯಲಾಟ ಪ್ರದರ್ಶನ ನಡೆಯಲಿದೆ. ಸಂಜೆ 5.30 ರಿಂದ 7 ರವರೆಗೆ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ವರವು ಗ್ರಾಮದ ಶ್ರೀ ಬೊಮ್ಮಲಿಂಗೇಶ್ವರ ವಾಲ್ಮೀಕಿ ನಾಟಕ ಕಲಾ ಸಂಘದ ವತಿಯಿಂದ ಕರೆಭಂಟನ ವಧೆ ಅರ್ಥಾತ್ ರಕ್ಕಸಿ ಉದ್ದಂಡಿಯ ಕಾರಸ್ಥಾನ ಬಯಲಾಟ ಪ್ರದರ್ಶನ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಡಿ.ಎಡ್ ಕೋರ್ಸ್‌ಗಳಿಗೆ ಉಚಿತ ತರಬೇತಿ: ಪ್ರವೇಶಾತಿ ಪ್ರಾರಂಭ

» ಚಿತ್ರದುರ್ಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಮೈಸೂರಿನಲ್ಲಿ ನಡೆಯುತ್ತಿರುವ ಅಂಧ ಹಾಗೂ ಶ್ರವಣದೋಷ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಪ್ರವೇಶಾತಿ ಪ್ರಾರಂಭವಾಗಿದೆ. ಜುಲೈ 12 ಅರ್ಜಿ ಸಲ್ಲಿಸಲು ಕೊನೆಯ ದಿನ. ರಾಷ್ಟ್ರೀಯ ಪುನರ್ವಸತಿ ಮಂಡಳಿ (ಆರ್‌ಸಿಐ) ಪಠ್ಯಕ್ರಮ ಹಾಗೂ ಮಾರ್ಗಸೂಚಿಯನ್ವಯ ಡಿಪ್ಲೊಮೊ ಇನ್ ಸ್ಪೆಷನ್ ಎಜುಕೇಷನ್ (ದೃಷ್ಠಿದೋಷ), ಡಿಪ್ಲೊಮೊ ಇನ್ ಸ್ಪೆಷಲ್ ಎಜುಕೇಷನ್ (ಶ್ರವಣದೋಷ) ವಿಶೇಷ ಡಿ.ಎಡ್ ಕೋರ್ಸ್‌ಗಳನ್ನು ನಡೆಸಲಾಗುತ್ತಿದೆ. ಈ ತರಬೇತಿ ಕೇಂದ್ರದಲ್ಲಿ 2025–26ನೇ ಸಾಲಿಗೆ ದೃಷ್ಠಿದೋಷ ಹಾಗೂ ಶ್ರವಣದೋಷ ಮಕ್ಕಳ ಶಿಕ್ಷಣ ಕ್ಷೇತ್ರದಲ್ಲಿ ಡಿಪ್ಲೊಮೊ ಇನ್ ಸ್ಪೆಷಲ್ ಎಜುಕೇಷನ್ (ದೃಷ್ಠಿದೋಷ), ಡಿಪ್ಲೊಮೊ ಇನ್ ಸ್ಪೆಷಲ್ ಎಜುಕೇಷನ್ (ಶ್ರವಣದೋಷ) ವಿಶೇಷ ಡಿ.ಎಡ್ ಕೋರ್ಸ್‌ಗಳಿಗೆ ಉಚಿತ ತರಬೇತಿಗೆ ಪ್ರವೇಶಾತಿ ಪ್ರಾರಂಭವಾಗಿರುತ್ತದೆ. ಉಚಿತವಾಗಿ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ನೀಡಲಾಗುತ್ತಿದೆ. ಪಿಯುಸಿ ಉತ್ತೀರ್ಣರಾದವರು ಹಾಗೂ ಪದವಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಂಧ ಹಾಗೂ ಶ್ರವಣದೋಷ ಮಕ್ಕಳ ತರಬೇತಿ ಕೇಂದ್ರ, ತಿಲಕ್ ನಗರ, ಮೈಸೂರು, ದೂರವಾಣಿ ಸಂಖ್ಯೆ 0821–2491600 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### ಬೈಕ್ ಪಲ್ಟಿ: ಒರ್ವಮಹಿಳೆ ಸಾವು, ಇಬ್ಬರಿಗೆ ಗಾಯ

» ಚಳ್ಳಕೆರೆ

ಮಡಕಶಿರತಾಲ್ಲೂಕಿನ ಹೇಮಾವತಿವಾಸಿಗಳಾದ ಮಂಜುನಾಥ ಮತ್ತು ಕುಟುಂಬ ವರ್ಗ ತಾಲ್ಲೂಕಿನ ಪುರ್ಲೆಹಳ್ಳಿ ಗ್ರಾಮದಲ್ಲೆ ನಡೆದ ಸಂಬಂಧಿಕರ ಹಬ್ಬದ ಕಾರ್ಯಕ್ರಮದಲ್ಲಿ ಪಾಲ್ಗೊಂದು ವಾಪಾಸ್ ತೆರಳುವ ಸಂದರ್ಭದಲ್ಲಿ ಅಮರಾಪುರ ವಲಸೆ ಬಳಿ ಚಲಿಸುತ್ತಿದ್ದ ಮೋಟಾರ್‌ಬೈಕ್ ಪಲ್ಟಿಯಾಗಿ ತೀರ್ವವಾಗಿ ಗಾಯಗೊಂಡ ಮಂಜುನಾಥ ಮತ್ತು ಕಾವ್ಯರವರನ್ನುಸಾರ್ವಜನಿಕಆಸ್ಪತ್ರೆಗೆದಾಖಲಿಸಿದ್ದು, ಮಂಜುನಾಥ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದ್ದು, ತಲೆಗೆ ಪೆಟ್ಟುಬಿದ್ದ ಕಾವ್ಯ ಆಸ್ಪತ್ರೆಗೆ ದಾಖಲಿಸುವಮಾರ್ಗಮಧ್ಯದಲ್ಲಿಮೃತಪಟ್ಟಿರುತ್ತಾಳೆ. ಅಮರಾಪುರ ಪೊಲೀಸರು ಪ್ರಕರಣ ದಾಖಲಿಸಿದ್ದು, ಅಪಘಾತದಲ್ಲಿ ಗಾಯಗೊಂಡ ಗಂಡುಮಗು ಚೇತರಿಸಿಕೊಳ್ಳುತ್ತಿದೆ.

## ಇಳಿಮುಖವಾದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ

# ವಿದ್ಯಾರ್ಥಿಗಳ ಶೈಕ್ಷಣಿಕ ಹಿನ್ನಡೆ ಅಪಾಯ

### ಪರೀಕ್ಷೆ ಫಲಿತಾಂಶ ಉತ್ತಮಪಡಿಸಲು ಗಂಭೀರ ಚಿಂತನೆ ನಡೆಸಿ: ಶಾಸಕ ಟಿ.ರಘುಮೂರ್ತಿ.

» ಚಳ್ಳಕೆರೆ



ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಮೇ.2ರಂದು ಪ್ರಕಟವಾಗಿದ್ದು ತಾಲ್ಲೂಕಿನ ಒಟ್ಟಾರೆ ಫಲಿತಾಂಶ ಶೇ.62ರಷ್ಟು, ಕಳೆದ ವರ್ಷಗಳಿಗೆ ಹೋಲಿಸಿದಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಭಾರಿ ಇಳಿಕೆಯಾಗಿದ್ದು, ಕಳವಳಕಾರಿ ಸಂಗತಿ. ಯಾವುದೇ ಶೈಕ್ಷಣಿಕ ಅಭಿವೃದ್ಧಿ ಬಯಸಬೇಕಾದರೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಅತ್ಯುತ್ತಮವಾಗಿರಬೇಕು. ಶಿಕ್ಷಣ ಇಲಾಖೆ ಈ ನಿಟ್ಟಿನಲ್ಲಿ ಗಂಭೀರಚಿಂತನೆ ನಡೆಸಬೇಕಲ್ಲದೆ, ಯಾವುದೇ ಹಂತದಲ್ಲೂ ಫಲಿತಾಂಶ ಕಡಿಮೆಯಾಗದಂತೆ ಜಾಗ್ರತೆ ವಹಿಸಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಹಿನ್ನಡೆ ಕುರಿತು ಆಯೋಜಿಸಿದ್ದ ತಾಲ್ಲೂಕುಮಟ್ಟದ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶವನ್ನು ಉತ್ತಮಪಡಿಸುವನಿಟ್ಟಿನಲ್ಲಿ ಪ್ರೌಢಶಾಲಾ ಮುಖ್ಯಶಿಕ್ಷಕರಿಗೆಹೆಚ್ಚುಮಾರ್ಗದರ್ಶನನೀಡಿ ಅವರನ್ನು ಕಾರ್ಯೋನ್ಮುಖರಾಗುವಂತೆ ಮಾಡಲು ಡಿಡಿಪಿಐ ಮಂಜುನಾಥ, ವಿದ್ಯಾಧಿಕಾರಿ ಸಿದ್ದಪ್ಪ, ಇಒ ಎಚ್.ಶಶಿಧರ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ ಸಭೆಯಲ್ಲಿ ಉಪಸ್ಥಿತರಿದ್ದರು.

ಶಾಸಕ ಟಿ.ರಘುಮೂರ್ತಿ ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ತೃಪ್ತಿತಂದಿಲ್ಲ, ಫಲಿತಾಂಶದಲ್ಲಿ ಏರುಪೇರಾಗಲು ಕಾರಣವೇನು, ಕಡಿಮೆ ಫಲಿತಾಂಶ ಪ್ರಕಟವಾಗಲು ನೈಜ್ಯಕಾರಣವನ್ನು ಪತ್ತೆಹಚ್ಚಬೇಕಿದೆ, ಫಲಿತಾಂಶ ಕಡಿಮೆಯಾಗದಲ್ಲಿ ಶಿಕ್ಷಣ ಇಲಾಖೆಯ ಆತ್ಮವಿಶ್ವಾಸ ಕುಸಿಯುತ್ತದೆ. ಈ ಹಿನ್ನೆಲೆಯಲ್ಲಿ ಮುಖ್ಯ ಶಿಕ್ಷಕರು ಹೆಚ್ಚುಚಿಂತನ, ಮಂಥನ ನಡೆಸಬೇಕಿದೆ. ಒಂದು ವರ್ಷಕಾಲ ತಮ್ಮ ಶಾಲೆಯಲ್ಲಿ ಅಭ್ಯಾಸಮಾಡುವವಿದ್ಯಾರ್ಥಿಗೆ ಕನಿಷ್ಠಪಕ್ಷ 35 ಅಂಕಗಳಿಸುವಷ್ಟು ಸಾಮರ್ಥ್ಯಬರುವ ರೂಪದಲ್ಲಿ ತಾವೆಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಿಕ್ಷಣ ಸಚಿವ ಮಧುಬಂಗಾರಪ್ಪ ಸಹ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶವನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಈಗಾಗಲೇ ಮಾಹಿತಿ ನೀಡಿದ್ದಾರೆ. ತಾಲ್ಲೂಕಿನಾದ್ಯಂತ ಎಲ್ಲಾ ಪ್ರೌಢಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಈ ಬಾರಿಯಾದರೂ ಗಣನೀಯವಾಗಿ ಏರಿಕೆಯಾಗಬೇಕು. ಸರ್ಕಾರ ಎಲ್ಲಾ ರೀತಿಯ ಸೌಲಭ್ಯ ನೀಡಿದರೂ ಸಹ ನಿರೀಕ್ಷಿತ ಮಟ್ಟದಲ್ಲಿ ಫಲಿತಾಂಶ ದಾಖಲಾಗದೇ ಇದ್ದರೆ ನೋವಿನ ಸಂಗತಿಯಾಗಿದೆ. ವಿದ್ಯಾರ್ಥಿಗಳ ಭವಿಷ್ಯವನ್ನು ಸದೃಢಗೊಳಿಸುವ ನಿಟ್ಟಿನಲ್ಲಿ ಮುಖ್ಯಶಿಕ್ಷಕರು ಇನ್ನೂ ಹೆಚ್ಚಿನ ಶ್ರಮವಹಿಸಬೇಕೆಂದರು. ಕಾರ್ಯಕ್ರಮದಲ್ಲಿ ಮುಖ್ಯಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಡಿಡಿಪಿಐ ಮಂಜುನಾಥ, ಚಳ್ಳಕೆರೆ ತಾಲ್ಲೂಕಿನಾದ್ಯಂತ ಈ ಬಾರಿ ಶೇ.62ರಷ್ಟು ಫಲಿತಾಂಶ ದಾಖಲಾಗಿದೆ. ತಾಲ್ಲೂಕಿನ ಎಲ್ಲಾ ಪ್ರೌಢಶಾಲೆಗಳಲ್ಲಿ ಶಾಸಕ ಟಿ.ರಘುಮೂರ್ತಿ ಮಾರ್ಗದರ್ಶನದಲ್ಲಿ ಬಿಇಒ ಕೆ.ಎಸ್.ಸುರೇಶ್ ವಿಶೇಷ ತರಬೇತಿ ಕಾರ್ಯಕ್ರಮಗಳ ಮೂಲಕ ಫಲಿತಾಂಶ ಹೆಚ್ಚಳಕ್ಕೆ ಹೆಚ್ಚುಶ್ರಮವಹಿಸಿದ್ದಾರೆ. ನಾನು ಸಹ ತಾಲ್ಲೂಕಿನ ಅನೇಕ ಶಾಲೆಗಳಿಗೆ ಭೇಟಿ ನೀಡಿ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ನಿರ್ದೇಶನ ನೀಡಿದ್ದೇನೆ. ಶಾಲೆಗಳಲ್ಲಿ ವಿದ್ಯೆಯನ್ನು ಕಲಿಯುವ ಆಸೆ ವಿದ್ಯಾರ್ಥಿಗಳಲ್ಲಿ ಉಂಟಾಗದಿದ್ದರೆ ಫಲಿತಾಂಶವನ್ನು ಉತ್ತಮಪಡಿಸಲು ಸಾಧ್ಯವಾಗದು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಏ.4ರಂದು ಪರೀಕ್ಷೆ ಆರಂಭವಾಯಿತು, ಪೂರ್ವಬಾವಿಯಾಗಿ ತಾಲ್ಲೂಕಿನ ಎಲ್ಲಾ ಪ್ರೌಢಶಾಲೆಗಳಲ್ಲಿ ಮುಖ್ಯಶಿಕ್ಷಕರು ಹಾಗೂ ಸಂಬಂಧಪಟ್ಟ ಶಿಕ್ಷಕರು ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ಮೂಲಕ ಶಿಕ್ಷಣವನ್ನು ನೀಡಿದ್ದಾರೆ. ಗುಣಾತ್ಮಕ ಬೋಧನೆ ನೀಡುವಲ್ಲಿ ನಮ್ಮ ಶಿಕ್ಷಕರು, ಮುಖ್ಯಶಿಕ್ಷಕರು ಯಶಸ್ವಿಯಾಗಿದ್ದಾರೆ. ಆದರೆ, ಪರೀಕ್ಷೆಯನ್ನು ಎದುರಿಸಿದ ಕೆಲವು ವಿದ್ಯಾರ್ಥಿಗಳು ಮಾತ್ರ ನಿರೀಕ್ಷಿತ ಮಟ್ಟದಲ್ಲಿ ಉತ್ತೀರ್ಣರಾಗದೆ ಫಲಿತಾಂಶ ಇಳಿಮುಖವಾಗಿದೆ. ತಾಲ್ಲೂಕಿನಾದ್ಯಂತ ಒಟ್ಟು 23 ಸರ್ಕಾರಿ ಪ್ರೌಢಶಾಲೆ, 46 ಅನುದಾನಿತ ಪ್ರೌಢಶಾಲೆ, 25 ಅನುದಾನರಹಿತ, 8 ವಸತಿಯುತ ಪ್ರೌಢಶಾಲೆ ಒಟ್ಟು 102 ಪ್ರೌಢಶಾಲೆಗಳಿವೆ. ಕ್ಷೇತ್ರದ ಶಾಸಕರು ಈಗಾಗಲೇ ಕ್ಷೇತ್ರದಾದ್ಯಂತ ಒಟ್ಟು 348 ಹೆಚ್ಚುವರಿಕೊಠಡಿಗಳನ್ನು ನಿರ್ಮಿಸಿಕೊಟ್ಟಿದ್ದಾರೆ. ಶಿಕ್ಷಣ ಇಲಾಖೆಯ ಪ್ರತಿಯೊಂದು ಅಭಿವೃದ್ಧಿ ಕಾರ್ಯಕ್ಕೂ ಸಹಕಾರ ನೀಡಿದ್ದಾರೆ. ಮೂಲಭೂತ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಯಶಸ್ವಿಯಾಗಿದ್ದಾರೆ. ಫಲಿತಾಂಶ ಉತ್ತಮ ಪಡಿಸುವ ನಿಟ್ಟಿನಲ್ಲಿ ಇನ್ನೂ ಹೆಚ್ಚಿನ ಪರಿಶ್ರಮ ವಹಿಸಲಾಗುವುದು ಎಂದರು.

## ಪೊಲೀಸ್ ಇಲಾಖೆಗೆ ವಾಹನ ಹಸ್ತಾಂತರ

» ಚಿತ್ರದುರ್ಗ




ಚಿತ್ರದುರ್ಗ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯ ಆವರಣದಲ್ಲಿ ಬುಧವಾರ ಬುಲೆರೋ ನಿಯೋ ಹೊಸ ಮಾದರಿಯ ವಾಹನವನ್ನು ಪೊಲೀಸ್ ಇಲಾಖೆಗೆ ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಹಸ್ತಾಂತರಿಸಿದರು. ಚಳ್ಳಕೆರೆ ಶಾಸಕರಾದ ಟಿ.ರಘುಮೂರ್ತಿಯವರು 2024–25ನೇ ಸಾಲಿನ ಶಾಸಕರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ಅಂದಾಜು ರೂ.11.7 ಲಕ್ಷ ವೆಚ್ಚದಲ್ಲಿ ಒಂದು ಬುಲೆರೋ ನಿಯೋ ವಾಹನವನ್ನು ಪೊಲೀಸ್ ಇಲಾಖೆಗೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಚಿತ್ರದುರ್ಗ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ಪಿ.ಕೆ.ದಿನಕರ್, ಚಳ್ಳಕೆರೆ ಪೊಲೀಸ್ ಉಪಾಧೀಕ್ಷಕ ರಾಜಣ್ಣ, ಪೊಲೀಸ್ ಇನ್ಸ್‌ಪೆಕ್ಟರ್‌ಗಳಾದ ಶಶಿಕುಮಾರ್, ತಿಮ್ಮಣ್ಣ, ಮುತ್ತುರಾಜ್, ಉಮೇಶ್ ಸೇರಿದಂತೆ ಮತ್ತಿತರರು ಇದ್ದರು.

## 1,560 ಅನುದಾನಿತ ಶಾಲೆಗೆ ಬೀಗ: ಡಿ.ಟಿ.ಶ್ರೀನಿವಾಸ್



ತುಮಕೂರು: ರಾಜ್ಯದಲ್ಲಿ 1,560 ಅನುದಾನಿತ ಶಾಲೆ ಮುಚ್ಚಲಾಗಿದೆ. ಶಿಕ್ಷಕರ ಕೊರತೆ, ವಿದ್ಯಾರ್ಥಿಗಳ ಸಂಖ್ಯೆ ಕುಸಿತ ಇದಕ್ಕೆ ಪ್ರಮುಖ ಕಾರಣ ಎಂದು ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ್ ಇಲ್ಲಿ ಮಂಗಳವಾರ ಹೇಳಿದರು.ನಗರದಲ್ಲಿ ಸುದ್ದಿಗಾರರ ಜತೆ ಮಾತನಾಡಿ, 'ಅನುದಾನಿತ ಶಾಲೆಗಳ ಉಳಿವಿಗೆ ಬದ್ಧನಾಗಿದ್ದೇನೆ. ಶಿಕ್ಷಕರ ಸಂಖ್ಯೆ ಕಡಿಮೆ ಇರುವುದರಿಂದ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗುತ್ತಿಲ್ಲ. ಖಾಸಗಿ, ಅನುದಾನಿತ ಶಾಲೆ ಬಂದ್ ಮಾಡಿ, ಸರ್ಕಾರಿ ಶಾಲೆಗಳನ್ನು ಮಾತ್ರ ನಡೆಸುವುದು ಸುಲಭವಲ್ಲ. ಶಿಕ್ಷಣ ಕ್ಷೇತ್ರಕ್ಕೆ ಸರ್ಕಾರದ ಜತೆಗೆ ಖಾಸಗಿ ಹಾಗೂ ಅನುದಾನಿತ ಶಾಲೆಗಳ ಕೊಡುಗೆ ಅಪಾರ' ಎಂದರು. ಶಾಲೆಗಳಲ್ಲಿ ಪೂರ್ಣ ಪ್ರಮಾಣದ ಶಿಕ್ಷಕರನ್ನು ಭರ್ತಿ ಮಾಡಬೇಕು. ಅನುದಾನಿತ ಶಾಲೆಗಳಲ್ಲಿ 2015ರಿಂದ ಖಾಲಿ ಇರುವ ಹುದ್ದೆಗಳಿಗೆ ನೇಮಕ ಮಾಡಿಕೊಂಡಿಲ್ಲ. ಕಾಂಗ್ರೆಸ್ ಸರ್ಕಾರದಲ್ಲಿ 15ರಿಂದ 20 ಸಾವಿರ ಶಿಕ್ಷಕರ ನೇಮಕಾತಿಗೆ ಅವಕಾಶ ಕಲ್ಪಿಸಲಾಗಿದೆ. ಒಳ ಮೀಸಲಾತಿ ಅಂತಿಮವಾದ ಬಳಿಕ ಖಾಲಿ ಹುದ್ದೆ ಭರ್ತಿಗೆ ಅನುಮತಿ ಪಡೆಯಲಾಗುವುದು ಎಂದು ತಿಳಿಸಿದರು.

## ಪ್ರಮುಖ ಸುದ್ದಿ

# ನಗರದ ಬಿ.ಡಿ.ರಸ್ತೆಗೆ ಪ್ರಧಾನಿ ಮೋದಿ ಹೆಸರು: ವಿರೋಧ

» ಚಿತ್ರದುರ್ಗ



ಚಿತ್ರದುರ್ಗ ನಗರದ ಬಿ.ಡಿ.ರಸ್ತೆಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಹೆಸರನ್ನು ಇಡುವುದಕ್ಕೆ ಕರ್ನಾಟಕ ರಾಜ್ಯ ಡಾ,ವಿಷ್ಣುವರ್ಧನ್ ಆದರ್ಶ ಬಳಗ ಆಕ್ಷೇಪವನ್ನು ವ್ಯಕ್ತಪಡಿಸಿದೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಡಾ,ವಿಷ್ಣುವರ್ಧನ್ ಆದರ್ಶ ಬಳಗದ ರಾಜ್ಯಾಧ್ಯಕ್ಷರಾದ ಗೌಸ್‌ಪೀರ್‌ಚಿತ್ರದುರ್ಗನಗರದಬಿ.ಡಿ.ರಸ್ತೆಗೆ ಈಗಾಗಲೇ ಡಾ,ವಿಷ್ಣುವರ್ಧನ ರಸ್ತೆ ಎಂದು 2018ರಲ್ಲಿಯೇ ಸರ್ಕಾರದವತಿಯಿಂದ ಅನುಮತಿಯನ್ನು ಪಡೆಯುವುದರ ಮೂಲಕ ಪಂಚಚಾರ್ಯ ಕಲ್ಯಾಣ ಮಂಟಪದ ಎದುರು ಡಾ,ವಿಷ್ಣುವರ್ಧನ ರಸ್ತೆ ಎಂದು ನಾಮಫಲಕವನ್ನು ಹಾಕಲಾಗಿದೆ. ಈಗ ಅದೇ ರಸ್ತೆಗೆ ನರೇಂದ್ರ ಮೋದಿಯವರ ಹೆಸರನ್ನು ಇಡಲು ನಗರಸಭೆ ಮುಂದಾಗಿರುವುದು ಸರಿಯಲ್ಲ ಎಂದಿದ್ದಾರೆ.ಬಿ.ಡಿ.ರಸ್ತೆಗೆ ಡಾ,ವಿಷ್ಣುವರ್ಧನ ರಸ್ತೆಯಂದು ನಾಮಕರಣ ಮಾಡುವಂತೆ 22–09–2015 ರಂದು ನಗರಸಭೆಗೆ ಪತ್ರವನ್ನು ನೀಡಲಾಗಿತ್ತು. ಇದರಂತೆ ಮಂಜುನಾಥ್ ಗೊಪ್ಪೆಯವರ ನಗರಸಭೆಗೆ ಅಧ್ಯಕ್ಷರಾಗಿದ್ದಾಗನಡೆದಸಮಾನ್ಯಸಭೆಯಲ್ಲಿ ಈ ವಿಷಯ ಚರ್ಚೆಗೆ ಬಂದು ಸದಸ್ಯರಿಂದ ಅನುಮೋದನೆ ಪಡೆದು ಪತ್ರಿಕೆಗಳಲ್ಲಿ ಇದರ ಬಗ್ಗೆ ಆಕ್ಷೇಪಣೆಯನ್ನು ಮಾಡಿದಾಗ ಯಾವುದೇ ಆಕ್ಷೇಪಣೆ ಬರದಿದ್ದಾಗ ಹಾಗೂ ಪೋಲಿಸ್ ಇಲಾಖೆಯಿಂದಲೂ ಸಹಾ ಯಾವುದೇ ರೀತಿಯ ಅಭ್ಯಂತರ ಇಲ್ಲ ಎಂದು ತಿಳಿಸಿದ್ದಾರೆ. ಅಂತಿಮವಾಗಿ ಹೆಸರಿಡಲು ಜಿಲ್ಲಾಧಿಕಾರಿಗಳವರಿಗೆ ಶಿಫಾರಸ್ಸು ಮಾಡಲಾಯಿತು, ಅಂದಿನ ಜಿಲ್ಲಾಧಿಕಾರಿಗಳಾಗಿದ್ದ ವಿ.ವಿ.ಜ್ಯೋತ್ಸ್ನ ರವರು ಪೌರಾಯುಕ್ತರ ಅನುಮೋದನೆ ಮೇರೆಗೆ 2017 ನವೆಂಬರ್ 24 ರಂದು ಪೌರಾಡಳಿತ ನಿರ್ದೇಶನಾಯಕ್ಕೆ ಪತ್ರವನ್ನು ಬರೆದರು, ಅಲ್ಲಿಂದ ಪೌರಾಡಳಿತ ನಿರ್ದೇಶನಾಯದಿಂದ 218–08–28 ರಂದು ಈ ರಸ್ತೆಗೆ ಡಾ,ವಿಷ್ಣುವರ್ಧನ್ ರಸ್ತೆ ಎಂದು ನಾಮಕರಣ ಮಾಡಬಹುದೆಂದು ಅನುಮತಿಯನ್ನು ನೀಡಲಾಯಿತು.ತದ ನಂತರ ಅಲ್ಲಿಂದ ಪಂಚಚಾರ್ಯ ಕಲ್ಯಾಣ ಮಂಟಪದ ಎದುರು ಡಾ,ವಿಷ್ಣುವರ್ಧನ ರಸ್ತೆ ಎಂದು ನಾಮಫಲಕವನ್ನು ಹಾಕಲಾಯಿತು.

ಈಗ ನಿನ್ನೆ ನಡೆದ ನಗರಸಭೆಯ ಸಾಮಾನ್ಯ ಸಭೆಯಲ್ಲಿ ಬಿ.ಡಿ.ರಸ್ತೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಹೆಸರನ್ನು ಇಡಲು ಸದಸ್ಯರಾದ ಶಶಿಧರ್ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಇದರ ಬಗ್ಗೆ ಸಭೆ ಸಮ್ಮತಿಯನ್ನು ಸೂಚಿಸಿದೆ ಎಂದು ತಿಳಿದು ಬಂದಿದೆ.ಈಗಾಗಲೇ ಒಮ್ಮೆ ರಸ್ತೆಗೆ ಹೆಸರನ್ನು ಇಡಲಾಗಿದೆ ಈಗ ಮತ್ತೋಮ್ಮೆ ಅದೆ ರಸ್ತೆಗೆ ಹೆಸರನ್ನು ಇಡುವುದು ಸರಿಯಲ್ಲ ಎಂದು ಗೌಸ್‌ಪೀರ್ ತಿಳಿಸಿದ್ದಾರೆ.

ಡಾ,ವಿಷ್ಣುವರ್ಧನ್‌ರವರಿಗೆ ತುಂಬಾ ಅನ್ಯಾಯವಾಗುತ್ತಿದೆ ಅವರು ಬದುಕಿದ್ದಾಗಲೂ ಸಹಾ ಸರ್ಕಾರ ಅವರನ್ನು ಗುರುತಿಸಿ ಯಾವುದೇ ಉನ್ನತವಾದ ಪ್ರಶಸ್ತಿಯನ್ನು ನೀಡಲಿಲ್ಲ ಈಗ ಅವರ ಮರಣದ ನಂತರ ಅವರ ಸ್ಮಾರಕವನ್ನು ಸಹಾ ಸರಿಯಾದ ರೀತಿಯಲ್ಲಿ ಅಭೀವೃದ್ದಿಯನ್ನು ಮಾಡದೇ ಸರ್ಕಾರ ಅವರಿಗೆ ಅನ್ಯಾಯ ಮಾಡುತ್ತಿದೆ, ಇದರ ವಿರುದ್ದ ನಾವು ಹಲವಾರು ಬಾರಿ ಹೋರಾಟವನ್ನು ಮಾಡುವುದರ ಮೂಲಕ ಸರ್ಕಾರದ ಗಮನವನ್ನು ಸೆಳೆದರು ಸಹಾ ಯಾವುದೇ ಕಾರ್ಯವಾಗಿಲ್ಲ ಎಂದು ನೊಂದು ನುಡಿದರು.

2025 ಸೆ. 18 ರಂದು ವಿಷ್ಣುವರ್ಧನ್ ರವರಿಗೆ 75 ವರ್ಷ ತುಂಬಲಿದೆ ಇದರ ಅಂಗವಾಗಿ ವಿಷ್ಣುವರ್ಧನ್ ಕಪ್ ಪಂದ್ಯಾವಳಿ,ಮಹಿಳೆಯರಿಗಾಗಿರಂಗೋಲಿ ಸ್ಪರ್ದೆ, ತುರುವನೂರು ರಸ್ತೆಯಲ್ಲಿನ ವಿಷ್ಣುವರ್ಧನ್ ಉದ್ಯಾನವನದಲ್ಲಿ ಅವರ ಪ್ರತಿಮೆ ಹಾಗೂ ಕನ್ನಡದ ಧ್ವಜ ಸ್ಥಂಭವನ್ನು ನಿರ್ಮಾಣ ಮಾಡಲು ಯೋಜನೆಯನ್ನು ರೂಪಿಸಲಾಗಿದೆ ಎಂದ ಗೌಸ್‌ಪೀರ್ ತಿಳಿಸಿದರು.

## ಫಾಸ್ಟ್ ನ್ಯೂಸ್

### ಅಮ್ಜದ್ ಖಾನ್ ನಿಧನ

» ಚಿತ್ರದುರ್ಗ



ನಗರದ ಪತಂಜಲಿ ಆಸ್ಪತ್ರೆಯ ಸಮೀಪದ ಅಸರ್ ಮೊಹಲ್ಲಾ ನಿವಾಸಿ ಅಮ್ಜದ್ ಖಾನ್ (58 ವರ್ಷ) ಇಂದು ಬೆಳಿಗ್ಗೆ 6:30ರ ವೇಳೆಗೆ ಹೃದಯಾಘಾತದಿಂದ ನಿಧನರಾದರು. ಕೆ.ಎಸ್.ಸಿ.ಎ. ಕ್ರಿಕೆಟ್ ನಲ್ಲಿ ಮಾನ್ಯತೆ ಪಡೆದಿರುವ ಏಕೈಕ ಅಂಪೈರ್ ಆಗಿ ಕಾರ್ಯ ನಿರ್ವಹಿಸುತ್ತಿದ್ದರು. ಮೃತರು ಪತ್ನಿ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗದವರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಇಂದು ಸಂಜೆ ನಗರದ ಮದೇಹಳ್ಳಿ ರಸ್ತೆಯ ಖಬರಸ್ಥಾನದಲ್ಲಿ ನೆರವೇರಿಸಲಾಯಿತೆಂದು ಕುಟುಂಬದ ಮೂಲಗಳು ತಿಳಿಸಿವೆ.

### ಆದರ್ಶ ವಿದ್ಯಾಲಯ ಪ್ರವೇಶ ಪರೀಕ್ಷೆಗೆ ಅರ್ಜಿ

» ಚಿತ್ರದುರ್ಗ

ಆದರ್ಶ ವಿದ್ಯಾಲಯಗಳಲ್ಲಿ ಖಾಲಿ ಇರುವ 7,8,9ನೇ ತರಗತಿಗೆ ದಾಖಲಾಗಲು ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 10 ಅರ್ಜಿ ಸಲ್ಲಿಸಲು ಕೊನೆಯ ದಿನ.
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತಿನ ವತಿಯಿಂದ ನಡೆಸಲಾಗುತ್ತಿರುವ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿರುವ ಆದರ್ಶ ವಿದ್ಯಾಲಯಗಳಲ್ಲಿ ಖಾಲಿ ಉಳಿದಿರುವ 7,8 ಹಾಗೂ 9 ನೇ ತರಗತಿಗೆ ದಾಖಲಾಗಲು ಪ್ರವೇಶ ಪರೀಕ್ಷೆ ನಡೆಯಲಿದೆ. ಜುಲೈ 18 ರಂದು ಬೆಳಿಗ್ಗೆ 10:30 ರಿಂದ 1 ಗಂಟೆವರೆಗೆ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲೂಕಿನ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ತಾಲ್ಲೂಕಿನ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಆಸಕ್ತ ವಿದ್ಯಾರ್ಥಿಗಳು ನೇರವಾಗಿ ಆದರ್ಶ ಶಾಲಾ ಶಿಕ್ಷಕರಿಗೆ ಜುಲೈ 10ರ ಒಳಗೆ ಅರ್ಜಿ ಸಲ್ಲಿಸಬಹುದು. ಈ ಎರಡು ತಾಲೂಕುಗಳ ಸ್ಥಳೀಯ ಖಾಯಾಂ ನಿವಾಸಿಗಳ ಮಕ್ಕಳು ಬೇರೆ ತಾಲೂಕು, ಜಿಲ್ಲೆ, ರಾಜ್ಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರೂ ಸಹ ಮೂಲ ತಾಲೂಕಿನಲ್ಲಿ ವ್ಯಾಸಂಗ ಮಾಡಲು ಇಚ್ಛಿಸಿದ್ದಲ್ಲಿ ಅರ್ಜಿ ಸಲ್ಲಿಸಬಹುದು.
ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಡಿಡಿಪಿಐ,ಬಿ.ಇ.ಓ/ಬಿ.ಆರ್.ಸಿ(ಆಡಳಿತ/ಅಭಿವೃದ್ಧಿ) ಹಾಗೂ ಚಳ್ಳಕೆರೆ, ಮೊಳಕಾಲ್ಮೂರು ತಾಲೂಕುಗಳ ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕರಿಗೆ ಸಂಪರ್ಕಿಸಬಹುದು ಡಯಟ್ ಪ್ರಾಚಾರ್ಯ ನಾಸಿರುದ್ದಿನ್ ತಿಳಿಸಿದ್ದಾರೆ.

### ಜೂ.27ರಂದು ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ ಸಮಾರಂಭ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರುಗಳ ಸಂಯುಕ್ತಾಶ್ರಯದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ ಸಮಾರಂಭವನ್ನು ಇದೇ ಜೂನ್ 27ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ.ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಶಾಸಕರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ, ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್.ಮಂಜುನಾಥ್, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾ ಒಕ್ಕಲಿಗರ ಸಂಘ ಅಧ್ಯಕ್ಷ ಜಿ.ಪಿ.ಚೇತನ್, ಕಾರ್ಯದರ್ಶಿ ಎಸ್.ಜಗನ್ನಾಥ್, ಗೌರವಾಧ್ಯಕ್ಷ ಪ್ರೊ.ಎನ್.ಈರಣ್ಣ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಹಾಗೂ ಜಿಲ್ಲೆಯ ಒಕ್ಕಲಿಗರ ಸಂಘದ ಸಮಸ್ತ ಗೌರವಾನ್ವಿತ ಮುಖಂಡರು ಹಾಗೂ ಸಮಾಜದ ಬಂಧುಗಳು ಭಾಗವಹಿಸುವರು. ಸಾಹಿತಿ ಹಾಗೂ ನಿವೃತ್ತ ಪ್ರಾಂಶುಪಾಲ ಡಾ.ಸಿ.ಶಿವಲಿಂಗಪ್ಪ ಉಪನ್ಯಾಸ ನೀಡುವರು. ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಹೋಬಳಿ ಬೋಸೇದೇವರಹಟ್ಟಿಯ ಮಂಜಣ್ಣ ಮತ್ತು ತಂಡದವರಿಂದ ಗೀತಗಾಯನ ನಡೆಯಲಿದೆ.

### ಶ್ರೀ ಕೆಂಪೇಗೌಡ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಜೂನ್ 27 ರಂದು ಬೆಳಿಗ್ಗೆ 11 ಗಂಟೆಗೆ ನಗರದ ವಿದ್ಯಾನಗರದಲ್ಲಿರುವ ಕುವೆಂಪು ಕನ್ನಡ ಭವನದಲ್ಲಿ ಶ್ರೀ ಕೆಂಪೇಗೌಡ ಜಯಂತಿ ಆಚರಿಸಲಾಗುತ್ತದೆ .

# ಕರುಣೆ, ಸಹಾನುಭೂತಿ ಮತ್ತು ಸಮಾಜ ಸೇವೆಯ ಸಂಕೇತವಾಗಿದೆ: ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ

» ಚಿತ್ರದುರ್ಗ

ಕಾಯಕವೇ ಕೈಲಾಸ ದಾಸೋಹವೇ ದೇವಧಾಮ. ಅನ್ನ ದಾಸೋಹವು ಭಾರತೀಯ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದೆ. ಅನ್ನದಾನವು ಕೇವಲ ಆಹಾರವನ್ನು ದಾನ ಮಾಡುವುದಲ್ಲ, ಅದು ಕರುಣೆ, ಸಹಾನುಭೂತಿ ಮತ್ತು ಸಮಾಜ ಸೇವೆಯ ಸಂಕೇತವಾಗಿದೆ. ಎಂದು ಭೋವಿಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.

ಭಾರತೀಯ ರೈಲ್ವೆ ಬೋರ್ಡಿನ ಮಾಜಿ ಸದಸ್ಯರಾದ ಡಾ.ಕೆ.ವಿ ಸಿದ್ಧರಾಜು ಕುಟುಂಬದಿಂದ ನಗರದ ಹೊರವಲಯದಲ್ಲಿರುವ ಎಸ್ ಜೆ ಎಸ್ ಸಮೂಹ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ ಹಾಗೂ ಅನ್ನದಾಸೋಹದ ಕೈಂಕರ್ಯವನ್ನು ನೆರವೇರಿಸಿದರು. ಸಮಾರಂಭದ ಸಾನ್ನಿಧ್ಯವಹಿಸಿ ಮಾತನಾಡಿದ ಶ್ರೀಗಳು

ವಿವಿಧ ಶ್ರೇಷ್ಠ ದಾನಗಳಲ್ಲಿ ಒಂದಾದ ಅನ್ನದಾನದ ಮಹತ್ವ ಅರಿತವರು



ಡಾ.ಕೆ.ವಿ.ಸಿದ್ಧರಾಜು. ಒಂದು ತುತ್ತು ಅನ್ನಕ್ಕೆ ಪರದಾಡುವ ಜನರಿಗೆ ಅನ್ನವೇ ದೇವರು ಆಗಿರುತ್ತದೆ. ಅನ್ನವೇ ಬದುಕಾಗಿರುತ್ತದೆ. ಅನ್ನವಿಲ್ಲದೇ ಈ ಜಗತ್ತಿನಲ್ಲಿ ಹಲವಾರು ಜನ ಪರದಾಡುತ್ತಾರೆ. ಈ ರೀತಿಯ ಬದುಕನ್ನು ಕಂಡ ಸಿದ್ಧರಾಜು ಅವರು ಬಾಲ್ಯದಲ್ಲಿ ಒಪ್ಪತ್ತಿನ ಗಂಜಿಗೂ ಅಲೆದಾಟ ನಡೆಸಿದ್ದಾರೆ. ಆಹಾರಕ್ಕಾಗಿ ಬದುಕಿನ ಹೊರಾಟ ಪ್ರಾರಂಭಿಸಿದ್ದಾರೆ. ಇಂದು ತಾವು ಉಂಟು ಬಡವರ ಹಸಿವನ್ನು ನೀಗಿಸುವ ಮಟ್ಟಕ್ಕೆ ಬೆಳೆದಿದ್ದಾರೆ. ಆಹಾರದ ಹಾಗೆ ನೀರು ಕೂಡಾ ಜೀವಕ್ಕೆ ತುಂಬಾ ಮುಖ್ಯವಾಗಿದೆ. ಬಾಯಾರಿಕೆಯಿಂದ ಸಾಯುವ ಸ್ಥಿತಿಯಲ್ಲಿ ಇರುವವನಿಗೆ ಒಂದು ಗುಟುಕು ನೀರು ಸಿಕ್ಕಿದರು ಸಹ ಅದು ಅವನಿಗೆ ಜೀವ ಜಲವೇ ಆಗಿರುತ್ತದೆ. ಆಗಾಗಿ ಸಿದ್ಧರಾಜು ಅವರು ಭೋವಿ ಗುರುಪೀಠದಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ಆಗಮಿಸುವ ಸದ್ಭಕ್ತರಿಗೆ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಿದ್ದಾರೆ.

ನಾವು ತಿನ್ನುವ ಅನ್ನದ ಒಂ□□□ಂದು ಆಗುಳಿನ ಮೇಲೂ ಅದನ್ನು ತಿನ್ನುವವರ ಹೆಸರು ಇರುತ್ತದೆ ಎನ್ನುವ ಮಾತು ಸಾಮಾನ್ಯವಾಗಿದೆ. ಅಕ್ಕಿಯು ಉಳಿದರೆ ನಾಳೆ ಅನ್ನಮಾಡಬಹುದು. ಅನ್ನ ಮಾಡಿ ತಿಂದು ಉಳಿದರೆ ನಂತರ ಅದನ್ನು ಬಿಸಾಕಬೇಕೆ ಹೊರತು ಅದು ನಾಳೆಗೆ ಹಾಳಾಗುತ್ತದೆ. ಹಾಗಾಗಿ ನಮಗೆ ಎಷ್ಟು ಬೇಕೋ ಅಷ್ಟೇ ಅಕ್ಕಿಯನ್ನು ಬಳಸಿ ಅನ್ನವನ್ನಾಗಿ ಪರಿವರ್ತಿಸಬೇಕು. ನಾಲ್ಕು ಅಗುಳು ಕಡಿಮೆ ತಿಂದರು ಪರವಾಗಿಲ್ಲ. ಹತ್ತು ಅಗುಳು ಹಾಳಾಗದಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

ಸಮಾರಂಭದಲ್ಲಿ ಶ್ರೀಮತಿ ಗೀತಾ ಸಿದ್ಧರಾಜು, ಶಾಂತರಾಮು, ನಾಗರಾಜು, ಚಂದ್ರಶೇಖರ, ಗೆರಗುಂಟೆಪಾಳ್ಯ ಸಿದ್ಧರಾಜು, ರಾಘವೇಂದ್ರ , ಶ್ರೀಧರ ಉಪಸ್ಥಿದರಿದ್ದರು.

## ಕ್ಷಯ ಸಾಂಕ್ರಾಮಿಕ ರೋಗೆ ಭಯ ಬೇಡ: ಡಾ.ಪವಿತ್ರ

» ಚಿತ್ರದುರ್ಗ

ಕ್ಷಯ ರೋಗವು ಒಂದು ಸಾಂಕ್ರಾಮಿಕ ರೋಗ. ಪ್ರಾಚೀನ ಕಾಲದಲ್ಲಿ ಸರಿಯಾದ ಚಿಕಿತ್ಸೆ ಇಲ್ಲದ ಕಾರಣ ಸಾರ್ವಜನಿಕರು ಆತಂಕ ಪಡುತ್ತಿದ್ದರು, ಆಧುನಿಕ ಯುಗದಲ್ಲಿ ಕ್ಷಯ ರೋಗಕ್ಕೆ ನಿಗದಿತ ಚಿಕಿತ್ಸೆ ಉಚಿತವಾಗಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯ ಇರುವುದರಿಂದ ಕ್ಷಯಕ್ಕೆ ಭಯ ಬೇಡ, ಸಾರ್ವಜನಿಕರು ಆತಂಕ ಪಡುವ ಅವಶ್ಯಕತೆ ಇಲ್ಲ ಎಂದು ಸಿರಿಗೆರೆಯ ಸಮುದಾಯ ಆರೋಗ್ಯ ಕೇಂದ್ರದ ಹೆರಿಗೆ ಮತ್ತು ಸ್ತ್ರೀರೋಗ ತಜ್ಞೆ ಡಾ.ಪವಿತ್ರ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ಆರೋಗ್ಯ ಇಲಾಖೆ ಹಾಗೂ ಜಾನ್ ಮೈನ್ಸ್ ವತಿಯಿಂದ ನಿಕ್ಷಯ ಮಿತ್ರ ಯೋಜನೆ ಅಡಿಯಲ್ಲಿ ಮೈನಿಂಗ್ ವಲಯದ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರದ 34 ಕ್ಷಯ ರೋಗಿಗಳಿಗೆ ಐದನೇ ಮಾಸಿಕ ಪೌಷ್ಟಿಕ ಆಹಾರದ ಕಿಟ್ ವಿತರಣೆ ಮಾಡಿ ಅವರು ಮಾತನಾಡಿದರು.

ಪೌಷ್ಟಿಕ ಆಹಾರದ ಕಿಟ್‌ಗಳಲ್ಲಿ ಕಾರ್ಬೋಹೈಡ್ರೇಟ್ಸ್, ಪ್ರೋಟೀನ್ಸ್ ಮತ್ತು ವಿಟಮಿನ್ಸ್ ಸೇರಿದ ಆಹಾರದ ಧಾನ್ಯಗಳು ಮತ್ತು ಡ್ರೈ ಫ್ರೂಟ್ಸ್‌ಗಳಿದ್ದು ಕ್ಷಯಾ ರೋಗಿಗಳು ಇವುಗಳ ಸದುಪಯೋಗಪಡಿಸಿಕೊಂಡು ಸರಿಯಾದ ಚಿಕಿತ್ಸೆ ಪಡೆದು, ಕುಟುಂಬದ



ಇತರರಿಗೆ ಸೋಂಕು, ಹರಡದಂತೆ ಜಾಗ್ರತೆವಹಿಸಿ ರೋಗದಿಂದ ಗುಣಮುಖ ಹೊಂದುವುದರ ಜೊತೆಗೆ ಕ್ಷಯ ಮುಕ್ತ ಜಿಲ್ಲೆಯನ್ನಾಗಿಸಲು ಕೈಜೋಡಿಸಬೇಕೆಂದರು.

ಎನ್‌ಟಿಇಪಿ ಕಚೇರಿ ಹಿರಿಯ ಚಿಕಿತ್ಸಾ ಮೇಲ್ವಿಚಾರಕ ಮಹೇಂದ್ರ ಮಾತನಾಡಿ, ತಮ್ಮಗಳ ಗ್ರಾಮಗಳಲ್ಲಿ ಯಾರಿಗಾದರೂ ಎರಡು ವಾರಕ್ಕಿಂತ ಹೆಚ್ಚು ಕೆಮ್ಮು, ಕಫ, ಕಫದಲ್ಲಿ ರಕ್ತ ಬರುವುದು, ತೂಕ ಕಡಿಮೆಯಾಗುವುದು, ಹಸಿವಾಗದಿರುವುದು, ಇಂತಹ ಲಕ್ಷಣಗಳಿದ್ದಲ್ಲಿ ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ಕಫ ಪರೀಕ್ಷೆ ಮಾಡಿಸಬೇಕು. ಕ್ಷಯ ರೋಗ ದೃಢಪಟ್ಟಲ್ಲಿ ಸರ್ಕಾರ ಉಚಿತವಾಗಿ ಕ್ಷಯ ರೋಗಿಯ ಮನೆ ಬಾಗಿಲಿಗೆ ಔಷಧಿ ಒದಗಿಸುತ್ತದೆ. ಜೊತೆಗೆ ಪೌಷ್ಟಿಕ ಆಹಾರ ಸೇವನೆಗಾಗಿ ಡಿಬಿಟಿ ಮುಖಾಂತರ ಚಿಕಿತ್ಸಾ ಅವಧಿಯಲ್ಲಿ ಮಾಸಿಕ ರೂ.1000 ರೋಗಿಯ ಬ್ಯಾಂಕ್ ಖಾತೆಗೆ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಆರೋಗ್ಯ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಅಥವಾ ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದರು.
ಕಾರ್ಯಕ್ರಮದಲ್ಲಿ ದಾನಿಗಳಾದ ಜಾನ್‌ಮೈನ್ಸ್‌ನ ಉಪ ವ್ಯವಸ್ಥಾಪಕ ಆರ್ ಪ್ರವೀಣ್ ಚಂದ್ರ ಮತ್ತು ಅಜಿತ್ ಕುಮಾರ್ ಮಾಳಿ ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನವೀನ್ ಕುಮಾರ್, ಚಂದ್ರಶೇಖರ್, ಅಜಯ್, ರವಿಕುಮಾರ್, ಇಸ್ಮಾಯಿಲ್, ಸುನಿಲ್ ಕುಮಾರ್, ಆಶಾ ಕಾರ್ಯಕರ್ತೆಯರು ಮತ್ತಿತರರು ಹಾಜರಿದ್ದರು.

## ಭದ್ರಾ ಜಲಾಶಯದ ಬಲದಂಡೆ ನಾಲೆ ಸೀಳುವುದಕ್ಕೆ ವಿರೋಧ



» ದಾವಣಗೆರೆ

ಭದ್ರಾ ಬಲದಂಡೆ ನಾಲೆಯನ್ನು ಸೀಳಿ ಚಿಕ್ಕಮಗಳೂರು ಹಾಗೂ ಚಿತ್ರದುರ್ಗ ಜಿಲ್ಲೆಗೆ ಕುಡಿಯುವ ನೀರು ಪೂರೈಕೆ ಮಾಡುವ ಕಾಮಗಾರಿ ಅವೈಜ್ಞಾನಿಕವಾಗಿದೆ ಎಂದು ಆರೋಪಿಸಿ ಬಿಜೆಪಿ ನಾಯಕರ ನೇತೃತ್ವದಲ್ಲಿ ರೈತರು ರಾಷ್ಟ್ರೀಯ ಹೆದ್ದಾರಿ ತಡೆದು ಬುಧವಾರ ಪ್ರತಿಭಟನೆ ನಡೆಸಿದರು. ನಗರದ ಹೊರವಲಯದ ಬಾಡಾ ಕ್ರಾಸ್ ಬಳಿಯ ರಾಷ್ಟ್ರೀಯ ಹೆದ್ದಾರಿ– 48ರಲ್ಲಿ ಜಮಾಯಿಸಿದ ಪ್ರತಿಭಟನಕಾರರು ಅರ್ಧ ಗಂಟೆಗೂ ಹೆಚ್ಚು ಹೊತ್ತು ಧರಣಿ ನಡೆಸಿದರು. ವಾಹನ ಸಂಚಾರಕ್ಕೆ ಅನುವು ಮಾಡಿಕೊಡುವ ಉದ್ದೇಶದಿಂದ ಪ್ರತಿಭಟನಕಾರರನ್ನು ಪೊಲೀಸರು ಬಂಧಿಸಿದರು. ರಾಜ್ಯ ಸರ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಪ್ರತಿಭಟನಕಾರರು ಆಕ್ರೋಶ ವ್ಯಕ್ತಪಡಿಸಿದರು. 'ಭದ್ರಾ ನೀರು ನಮ್ಮ ಹಕ್ಕು', 'ಅವೈಜ್ಞಾನಿಕ ಕಾಮಗಾರಿ ಸ್ಥಗಿತಗೊಳಿಸಿ' ಎಂದು ಘೋಷಣೆ ಕೂಗಿದ ಪ್ರತಿಭಟನಾಕಾರರು ಹೆದ್ದಾರಿಯಲ್ಲಿ ಮೆರವಣಿಗೆ ನಡೆಸಿದರು. ಇದನ್ನು ತಡೆಯಲು ಮುಂದಾದ ಪೊಲೀಸರೊಂದಿಗೆ ವಾಗ್ವಾದ ನಡೆಸಿದರು. ಹೆದ್ದಾರಿಯಲ್ಲೇ ಧರಣಿ ಕುಳಿತು ವಾಹನ ಸಂಚಾರ ತಡೆದರು. ಬಳಿಕ ಪೊಲೀಸರು ಎಲ್ಲರನ್ನೂ ಬಂಧಿಸಿದರು. ಈ ವೇಳೆ ರೈತ ಮುಖಂಡ ನಾಗೇಶ್ವರ ರಾವ್ ಅಸ್ವಸ್ಥಗೊಂಡರು. 'ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರ ಹಿತಾಸಕ್ತಿ ಕಾಪಾಡಲು ಪ್ರತಿಭಟನೆ ನಡೆಸುತ್ತಿದ್ದವರನ್ನು ಪೊಲೀಸರು ಬಂಧಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಪೊಲೀಸ್ ಇಲಟಖೆಯನ್ನು ದುರ್ಬಳಕೆ ಮಾಡಿಕೊಂಡಿದೆ. ನಾಲೆ ಸೀಳಿ ಭದ್ರಾ ನೀರು ಪೂರೈಕೆ ಮಾಡಲು ಅಚ್ಚುಕಟ್ಟು ಪ್ರದೇಶದ ರೈತರು ಅವಕಾಶ ನೀಡುವುದಿಲ್ಲ. ಲಜ್ಜೆಗೆಟ್ಟ ಸರ್ಕಾರಕ್ಕೆ ಬುದ್ಧಿಕಲಿಸಲು ಹೋರಾಟ ತೀವ್ರಗೊಳಿಸಲಾಗುವುದು' ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಆಕ್ರೋಶ ವ್ಯಕ್ತಪಡಿಸಿದರು. ಮಾಜಿ ಶಾಸಕ ಬಸವರಾಜ ನಾಯ್ಕ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಎನ್.ರಾಜಶೇಖರ್, ಜಿಲ್ಲಾ ರೈತ ಒಕ್ಕೂಟದ ಮುಖಂಡ ಕೋಳೆನಹಳ್ಳಿ ಬಿ.ಎಂ. ಸತೀಶ್, ಬಿಜೆಪಿ ಮುಖಂಡರಾದ ಲೋಕಿಕೆರೆ ನಾಗರಾಜ್, ಧನಂಜಯ ಕಡ್ಲೆಬಾಳು ಹಾಜರಿದ್ದರು.

## ಚಳ್ಳಕೆರೆ ಕ್ಷೇತ್ರ ವ್ಯಾಪ್ತಿಯ ಬಿಜೆಪಿಮಂಡಲದ ನೂತನ ಕಾರ್ಯಕಾರಿ ಸಮಿತಿ ರಚನೆ

» ಚಳ್ಳಕೆರೆ

ಭಾರತೀಯ ಜನತಾಪಕ್ಷದ ಚಳ್ಳಕೆರೆ ವಿಧಾನಸಭಾ ವ್ಯಾಪ್ತಿಯ ಕಾರ್ಯಕಾರಿ ಮಂಡಳಿಯನ್ನುರಸಚಿಸಲಾಗಿದೆಎಂದುಅಧ್ಯಕ್ಷಬಿ.ಎಂ.ಸುರೇಶ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್ ಹಾಗೂ ಹಿರಿಯ ಮಾರ್ಗದರ್ಶನದಲ್ಲಿ ನೂತನ ಕಾರ್ಯಕಾರಿ ಮಂಡಳಿಯನ್ನು ರಚಿಸಿದ್ದು ಮುಂಬರುವ ದಿನಗಳಲ್ಲಿ ಆಯ್ಕೆಗೊಂಡ ಎಲ್ಲರೂ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವಂತೆ ಮನವಿಮಾಡಲಾಗಿದೆ ಎಂದರು. ಉಪಾಧ್ಯಕ್ಷರಾಗಿ ಹಾಯ್ಕಲ್ ಮಂಜುನಾಥರೆಡ್ಡಿ, ಪರಶುರಾಮಪುರದ ಸಿದ್ದೇಶ್, ಹೊನ್ನಯ್ಯನರೊಪ್ಪದ ಚಿದಾನಂದಪ್ಪ, ದೊಡ್ಡಚೆಲ್ಲೂರು ಶ್ರೀದೇವಿ, ಕಲಮರಹಳ್ಳಿಯ ಸಿದ್ದೇಶ್ವರಪ್ಪ, ಹೊಟ್ಟೆಪ್ಪನಹಳ್ಳಿ ಆರ್. ಕಾಂತರಾಜ್, ಸಿದ್ದಾಪುರ ರುದ್ರಮುನಿ, ಪ್ರಧಾನ ಕಾರ್ಯದರ್ಶಿಗಳಾಗಿ ಮೀರಸಾಬಿಹಳ್ಳಿಸುರೇಶ್, ಮುದ್ದಾಪುರದ ಓಬಳೇಶ್, ಕಾರ್ಯದರ್ಶಿಯಾಗಿ ರಂಗವ್ವನಹಳ್ಳಿಚನ್ನವೀರಪ್ಪ, ಚಿತ್ರಯ್ಯನಹಟ್ಟಿಅಂಬಿಕಾ, ಅಂಬೇಡ್ಕರ್‌ನಗರದ ಶ್ರೀನಿವಾಸ್, ದೇವರಮರಿಕುಂಟೆಯ ಜಿ.ಟಿ.ನವೀನ್, ನಗರದ ಬಿ.ಅಶೋಕ್, ಚಿಕ್ಕಗೊಂಡನಹಳ್ಳಿದಿನೇಶ್‌ರವರನ್ನು ಆಯ್ಕೆ ಮಾಡಲಾಗಿದೆ. ಕಚೇರಿ ಕಾರ್ಯದರ್ಶಿಯಾಗಿ ಜಾಜೂರು ರಾಮಾಂಜನೇಯ, ಖಜಾಂಚಿಯಾಗಿ ಬಿ.ಎಂ.ಶ್ರೀನಿವಾಸ್(ಮಂಡಿ), ನಗರ ಘಟಕದ ಅಧ್ಯಕ್ಷರನ್ನಾಗಿ ಕೃಷ್ಣಪ್ಪರವರನ್ನು ಆಯ್ಕೆ ಮಾಡಿದೆ. ಕ್ಷೇತ್ರದ ಯುವಮೋರ್ಚಾ ಅಧ್ಯಕ್ಷರಾಗಿ ಮುದ್ದಾಪುರಸಂಜಯ್‌ರೇವಣ್ಣ, ಪ್ರಧಾನ ಕಾರ್ಯದರ್ಶಿಯಾಗಿ ಗಾಂಧಿನಗರದ ಮಲ್ಲಿಕಾರ್ಜುನ್, ರೈತಮೋರ್ಚಾ ಅಧ್ಯಕ್ಷರಾಗಿ ಜಾಜೂರಿನ ಎನ್.ಕೆ.ರವಿ, ಮಹಿಳಾಘಟಕದ ಅಧ್ಯಕ್ಷೆಯಾಗಿ ನಗರದ ಸಹನ, ಎಸ್ಟಿ ಮೋರ್ಚಾ ಅಧ್ಯಕ್ಷರಾಗಿ ನನ್ನಿವಾಳ ದೊರೆನಾಗರಾಜು, ಎಸ್ಸಿ ಮೋರ್ಚಾ ಪಿ.ಗೌರಿಪುರದವೀರಭದ್ರಪ್ಪ, ಹಿಂದುಳಿದ ವರ್ಗಗಳ ಅಧ್ಯಕ್ಷರಾಗಿ ಯಲಗಟ್ಟೆಶ್ರೀನಿವಾಸ್, ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷರಾಗಿ ಮೀರಸಾಬಿಹಳ್ಳಿ ಬಾಬಾಪಕ್ರುದ್ದೀನ್ ಆಯ್ಕೆಯಾಗಿದ್ದಾರೆ.

## ಪ್ರಮುಖ ಸುದ್ದಿ

# ಕರುಣೆ, ಸಹಾನುಭೂತಿ ಮತ್ತು ಸಮಾಜ ಸೇವೆಯ ಸಂಕೇತವಾಗಿದೆ: ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ

» ಚಿತ್ರದುರ್ಗ

ಕಾಯಕವೇ ಕೈಲಾಸ ದಾಸೋಹವೇ ದೇವಧಾಮ. ಅನ್ನ ದಾಸೋಹವು ಭಾರತೀಯ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದೆ. ಅನ್ನದಾನವು ಕೇವಲ ಆಹಾರವನ್ನು ದಾನ ಮಾಡುವುದಲ್ಲ, ಅದು ಕರುಣೆ, ಸಹಾನುಭೂತಿ ಮತ್ತು ಸಮಾಜ ಸೇವೆಯ ಸಂಕೇತವಾಗಿದೆ. ಎಂದು ಭೋವಿಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.

ಭಾರತೀಯ ರೈಲ್ವೆ ಬೋರ್ಡಿನ ಮಾಜಿ ಸದಸ್ಯರಾದ ಡಾ.ಕೆ.ವಿ ಸಿದ್ಧರಾಜು ಕುಟುಂಬದಿಂದ ನಗರದ ಹೊರವಲಯದಲ್ಲಿರುವ ಎಸ್ ಜೆ ಎಸ್ ಸಮೂಹ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ ಹಾಗೂ ಅನ್ನದಾಸೋಹದ ಕೈಂಕರ್ಯವನ್ನು ನೆರವೇರಿಸಿದರು. ಸಮಾರಂಭದ ಸಾನ್ನಿಧ್ಯವಹಿಸಿ ಮಾತನಾಡಿದ ಶ್ರೀಗಳು

ವಿವಿಧ ಶ್ರೇಷ್ಠ ದಾನಗಳಲ್ಲಿ ಒಂದಾದ ಅನ್ನದಾನದ ಮಹತ್ವ ಅರಿತವರು



ಡಾ.ಕೆ.ವಿ.ಸಿದ್ಧರಾಜು. ಒಂದು ತುತ್ತು ಅನ್ನಕ್ಕೆ ಪರದಾಡುವ ಜನರಿಗೆ ಅನ್ನವೇ ದೇವರು ಆಗಿರುತ್ತದೆ. ಅನ್ನವೇ ಬದುಕಾಗಿರುತ್ತದೆ. ಅನ್ನವಿಲ್ಲದೇ ಈ ಜಗತ್ತಿನಲ್ಲಿ ಹಲವಾರು ಜನ ಪರದಾಡುತ್ತಾರೆ. ಈ ರೀತಿಯ ಬದುಕನ್ನು ಕಂಡ ಸಿದ್ಧರಾಜು ಅವರು ಬಾಲ್ಯದಲ್ಲಿ ಒಪ್ಪತ್ತಿನ ಗಂಜಿಗೂ ಅಲೆದಾಟ ನಡೆಸಿದ್ದಾರೆ. ಆಹಾರಕ್ಕಾಗಿ ಬದುಕಿನ ಹೊರಾಟ ಪ್ರಾರಂಭಿಸಿದ್ದಾರೆ. ಇಂದು ತಾವು ಉಂಟು ಬಡವರ ಹಸಿವನ್ನು ನೀಗಿಸುವ ಮಟ್ಟಕ್ಕೆ ಬೆಳೆದಿದ್ದಾರೆ. ಆಹಾರದ ಹಾಗೆ ನೀರು ಕೂಡಾ ಜೀವಕ್ಕೆ ತುಂಬಾ ಮುಖ್ಯವಾಗಿದೆ. ಬಾಯಾರಿಕೆಯಿಂದ ಸಾಯುವ ಸ್ಥಿತಿಯಲ್ಲಿ ಇರುವವನಿಗೆ ಒಂದು ಗುಟುಕು ನೀರು ಸಿಕ್ಕಿದರು ಸಹ ಅದು ಅವನಿಗೆ ಜೀವ ಜಲವೇ ಆಗಿರುತ್ತದೆ. ಆಗಾಗಿ ಸಿದ್ಧರಾಜು ಅವರು ಭೋವಿ ಗುರುಪೀಠದಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ಆಗಮಿಸುವ ಸದ್ಭಕ್ತರಿಗೆ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಿದ್ದಾರೆ.

ನಾವು ತಿನ್ನುವ ಅನ್ನದ ಒಂ□□□ಂದು ಆಗುಳಿನ ಮೇಲೂ ಅದನ್ನು ತಿನ್ನುವವರ ಹೆಸರು ಇರುತ್ತದೆ ಎನ್ನುವ ಮಾತು ಸಾಮಾನ್ಯವಾಗಿದೆ. ಅಕ್ಕಿಯು ಉಳಿದರೆ ನಾಳೆ ಅನ್ನಮಾಡಬಹುದು. ಅನ್ನ ಮಾಡಿ ತಿಂದು ಉಳಿದರೆ ನಂತರ ಅದನ್ನು ಬಿಸಾಕಬೇಕೆ ಹೊರತು ಅದು ನಾಳೆಗೆ ಹಾಳಾಗುತ್ತದೆ. ಹಾಗಾಗಿ ನಮಗೆ ಎಷ್ಟು ಬೇಕೋ ಅಷ್ಟೇ ಅಕ್ಕಿಯನ್ನು ಬಳಸಿ ಅನ್ನವನ್ನಾಗಿ ಪರಿವರ್ತಿಸಬೇಕು. ನಾಲ್ಕು ಅಗುಳು ಕಡಿಮೆ ತಿಂದರು ಪರವಾಗಿಲ್ಲ. ಹತ್ತು ಅಗುಳು ಹಾಳಾಗದಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

ಸಮಾರಂಭದಲ್ಲಿ ಶ್ರೀಮತಿ ಗೀತಾ ಸಿದ್ಧರಾಜು, ಶಾಂತರಾಮು, ನಾಗರಾಜು, ಚಂದ್ರಶೇಖರ, ಗೆರಗುಂಟೆಪಾಳ್ಯ ಸಿದ್ಧರಾಜು, ರಾಘವೇಂದ್ರ , ಶ್ರೀಧರ ಉಪಸ್ಥಿದರಿದ್ದರು.

# ರೈತರು, ಗ್ಯಾರಂಟಿ ಸದಸ್ಯರ ನಡುವೆ ವಾಗ್ವಾದ

» ಎಸ್.ವೇದಮೂರ್ತಿ ಹೊಳಲ್ಕೆರೆ

ಹೊಳಲ್ಕೆರೆ : ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲು ಭೀಮಾ ಯೋಜನೆಯ ಜಾಗೃತಿ ಹಾಗೂ ರೈತರ ವಿವಿಧ ಸಮಸ್ಯೆಗಳ ಕುರಿತು ಸಂವಾದ ನಡೆಸಲು ಚಿತ್ರದುರ್ಗದ ಜಿಲ್ಲಾ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ ಬುಧವಾರ ತಾಲೂಕು ಪಂಚಾಯಿತಿ ಆವರಣದಲ್ಲಿ ಕರೆದಿದ್ದ ಸಭೆಯಲ್ಲಿ ರೈತ ಬಣಗಳ ಹಾಗೂ ಗ್ಯಾರಂಟಿ ಯೋಜನೆಯ ಸದಸ್ಯರ ನಡುವೆ ಉಂಟಾದ ಮಾತಿನ ಚಕಮಕಿ, ಮಾರಾಮಾರಿ, ವಾಗ್ವಾದದಿಂದ ಸಭೆಯಲ್ಲಿ ಗೊಂದಲ ಸೃಷ್ಟಿಯಾದ ಹಿನ್ನೆಲೆಯಲ್ಲಿ ಸಭೆಯನ್ನು ಅರ್ಧಕ್ಕೆ ಮಟುಕುಗೊಳಿಸಿ ಜಿಲ್ಲಾ ಉಪವಿಭಾಗಾಧಿಕಾರಿ ಸಭೆಯಿಂದ ಹೊರನಡೆದರು.

ಇದಕ್ಕೂ ಮೊದಲು ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖರೇಷಿ ಮಾತನಾಡಿ, ರೈತರು ಸುರಕ್ಷಾ ಪ್ರಧಾನ ಮಂತ್ರಿ ಫಸಲು ಭೀಮಾ ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು.

ತಾಲೂಕಿನಲ್ಲಿ ಮುಸುಕಿನ ಜೋಳ, ರಾಗಿ ಮತ್ತಿತರಬೆಳೆಗಳಿಗೆವಿಮಾಸೌಲಭ್ಯಕಲ್ಪಿಸಿದೆ. ತೊಂದರೆ ತೊಡಕುಗಳಿದ್ದಲ್ಲಿ ಮುಕ್ತವಾಗಿ ಚರ್ಚಿಸಲು ಅವಕಾಶವಿದೆ. ರೈತರು ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವಂತೆ ಸಲಹೆ ನೀಡಿದರು.

ಕೆಲವಡೆ ಕಳಪೆ ಗೊಬ್ಬರ, ಬೀಜ ವಿತರಣೆ ಮಾಡಿರುವ ಬೀಜದ ಅಂಗಡಿಗಳ ವಿರುದ್ಧ ರೈತರು ದೂರು ಸಲ್ಲಿಸಿದ್ದಾರೆ. ಹಾಗಾಗಿ





ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರು ತಾಲೂಕಿನಲ್ಲಿರುವ ಎಲ್ಲಾ ಗೊಬ್ಬರ ಔಷಧಿ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಿ ಗುಣಮಟ್ಟದ ಗೊಬ್ಬರ ಬೀಜ ಮಾರಾಟಕ್ಕೆ ಕ್ರಮ ಕೈಗೊಳ್ಳುವಂತೆ ಸಲಹೆ ನೀಡಿದರು.

ಇದಕ್ಕೆ ಉತ್ತರಿಸಿದ ತಾಲೂಕು ಸಹಾಯಕ ಕೃಷಿ ನಿರ್ದೇಶಕ ಚಂದ್ರಕುಮಾರ್ ತಾಲೂಕಿನಲ್ಲಿ ಗೊಬ್ಬರ ಕ್ರಿಮಿನಾಶದ ಅಂಗಡಿಗಳಿಗೆ ಭೇಟಿ ನೀಡಿದೆ. ಗೊಬ್ಬರ ಬೀಜ ಪರಿಶೀಲಿಸಿದೆ. ಕಳಪೆ ಕಂಡುಬಂದಲ್ಲಿ ಕ್ರಮ ಕೈಗೊಳ್ಳುವ ಎಚ್ಚರಿಗೆ ನೀಡಿದ್ದು, ಗುಣಮಟ್ಟದ ಬೀಜಗೊಬ್ಬರ ಮಾರಾಟಕ್ಕೆ ಕ್ರಮ ವಹಿಸಿದೆ ಹಾಗಾಗಿ ನಮ್ಮ ತಾಲೂಕಿನಲ್ಲಿ ಅಂತಂಹ ಪ್ರಕರಣಗಳು ಇಲ್ಲವೆಂದು ತಿಳಿಸಿದರು.

ಬಾಕ್ಸ್ : ತಹಶೀಲ್ದಾರ್ ಭೀಬಿ ಫಾತಿಮಾ ಮಾತನಾಡಿ, ತಾಲೂಕಿನ ಎಲ್ಲಾ ಬೆಳೆ ಸರ್ವೆ ಮಾಡಿಸಿ ಪಹಣಿಯಲ್ಲಿ ನಮೂದಿಸಿದೆ. ಬೆಳೆಯನ್ನು ಹ್ಯಾಪ್ ಮೂಲಕ ನೋಂದಾಯಿಸಿಕೊಳ್ಳಲು ರೈತರಿಗೆ ಅವಕಾಶವಿದೆ.

ರೈತರು ಸಮಸ್ಯೆಗಳು ಬಂದಿಲ್ಲಿ ನೇರವಾಗಿ ನಮ್ಮನ್ನು ಸಂಪರ್ಕ ಮಾಡಿ ಪರಿಹರಿಸಿಕೊಳ್ಳಬೇಕೆಂದು ತಿಳಿಸಿದರು.

ರೈತ ಸಂಘದ ತಾಲೂಕ ಅಧ್ಯಕ್ಷ ರಂಗಸ್ವಾಮಿ ಮಾತನಾಡಿ, ಬೆಳೆ ವಿಮೆಯಲ್ಲಿ ಸಾಕಷ್ಟು ಗೊಂದಲಗಳಿವೆ. ರೈತರಿಗೆ ಸರಿಯಾಗಿ ಅರ್ಥವಾಗುತ್ತಿಲ್ಲ, ಬೆಳೆ ವಿಮೆ ಕಟ್ಟಿದರೂ ರೈತರಿಗೆ ಹಣ ಬಂದಿಲ್ಲ ಎನ್ನವ ದೂರುಗಳಿವೆ. ಇದನ್ನೆಲ್ಲ ಸರಿಪಡಿಸುವಂತೆ ಮನವಿ ಮಾಡಿದರು.

ರೈತ ಮುಖಂಡ ಡಿ.ಎಸ್. ಮಲ್ಲಿಕಾರ್ಜುನಪ್ಪ ಮಾತನಾಡಿ, ಸರ್ಕಾರ ಕೃಷಿ ಇಲಾಖೆ ಮೂಲಕ ವಿಮಾ ಹೆಸರಲ್ಲಿ ರೈತರಿಂದ ಹಣ ವಸೂಲಿ ಮಾಡುವ ದಂದೆಗಿಳಿದಿದೆ. ರೈತರ ಹಾಗೂ ವಿಮಾ ಕಂಪನಿ ನಡುವೆ ಸಂವಾದ ನಡೆಯಬೇಕು. ಹಣಕ್ಕೆ ತಕ್ಕಂತೆ ಪಾಲಿಸಿ ಮತ್ತು ಅದರ ವಿವರವನ್ನು ವಿಮಾ ಕಂಪನಿ ರೈತರಿಗೆ ನೀಡಬೇಕು. ಅವರನ್ನು ಇಲ್ಲಿಗೆ ಕರೆಸಬೇಕೆಂದು ಒತ್ತಾಯಿಸಿದರು.

ಭಾರತೀಯ ಕಿಸಾನ್ ಸಂಘದ ತಾಲೂಕ ಅಧ್ಯಕ್ಷ ಸುರೇಶ್ ಚೀರನಹಳ್ಳಿ ಮಾತನಾಡಿ, ಬೆಳೆ ವಿಮೆ ಕುರಿತು ಸಾರ್ವಜನಿಕರಲ್ಲಿ ಇನ್ನಷ್ಟು ಜಾಗೃತಿ ಮೂಡಿಸಬೇಕು. ತಾಲೂಕಿನ ಪ್ರಮುಖ ಬೆಳೆ ಮುಸುಕಿನ ಜೋಳ, ರಾಗಿಗಳಿಗೆ ಕೆಲವು ಪ್ರದೇಶದಲ್ಲಿ ವಿಮೆ ಆಗದಂತೆ ಕೈ ಬಿಡಲಾಗಿದೆ. ರಾಗಿ ಮತ್ತು ಮುಸುಕಿನ ಜೋಳ ಮತ್ತಿತರ ಬೆಳೆಗಳಿಗೆ ವಿಮೆ ಮಾಡಿಸಿಕೊಂಡಾಗ ಪರಿಹಾರವನ್ನು ಪಡೆಯಲು ಸೂಕ್ತ ಮಾಹಿತಿ ನೀಡಬೇಕೆಂದು ಮನವಿ ಮಾಡಿದರು.

ಗ್ಯಾರಂಟಿ ಯೋಜನೆಯ ಸದಸ್ಯರ ತಾಳಿಕಟ್ಟೆ ಬಿ.ಗಂಗಾಧರ ಮಾತನಾಡಿ, ತಾಳಿಕಟ್ಟೆ ರಾಮಗಿರಿ ಸುತ್ತಮುತ್ತ ಮಳೆ ಬಂದಿಲ್ಲ. ರೈತರು ಬಿತ್ತನೆ ಮಾಡಿಲ್ಲ. ಸರ್ಕಾರಕ್ಕೆ ಇಲ್ಲಿನ ಬರ ಬಂದಿದೆ ಎಂದು ವರದಿ ನೀಡಿ ಬರ ಪ್ರದೇಶವೆಂದು ಘೋಷಿಸುವಂತೆ ಮನವಿ ಮಾಡಿದರು.

ರೈತ ಸಂಘದ ನಡುವೆ ಬಣ ಬಡದಾಟ ನಡೆಯುತ್ತಿದೆ. ಇಲ್ಲಿನ ಅಸಲಿ ರೈತ ಯಾರು, ನಕಲಿ ಯಾರು ಎನ್ನುವುದೇ ಗೊತ್ತಾಗುತ್ತಿಲ್ಲ.

ಎಲ್ಲರೂ ಮನಸ್ಸಿಗೆ ತಿಳಿದಂತೆ ಮಾತನಾಡುತ್ತಿದ್ದಾರೆ ಎಂದಾಗ ರೈತ ಸಂಘದ ಸದಸ್ಯರು ಇವರ ಮೇಲೆ ಮುಗಿಬಿದ್ದು ನಕಲಿ ರೈತರು ಎಂದು ಯಾವ ಆಧಾರದಲ್ಲಿ ಹೇಳಿದ್ದೀರಾ ಕ್ಷಮೆಯಾಚನೆ ಮಾಡಬೇಕೆಂದು ರೈತ ಸಂಘದ ಸದಸ್ಯರು ಆಗ್ರಹಿಸಿದಾಗ ಸಭೆಯಲ್ಲಿ ಗೊಂದಲ ಸೃಷ್ಟಿಯಾಗಿ ಕೈ ಮಿಲಾಯಿಸುವ ಹಂತಕ್ಕೆ ಹೋದಾಗ ಪೊಲೀಸರು ತಡೆದರು. ಇದರಿಂದ ಬೇಸತ್ತ ಜಿಲ್ಲಾ ಉಪವಿಭಾಗಾಧಿಕಾರಿ ಸಭೆಯನ್ನು ಮೋಟುಕುಗೊಳಿಸಿ ಹೊರ ನಡೆದರು.

ಸಭೆಯಲ್ಲಿ ರೈತ ಸಂಘದ ನಗರ ಘಟಕದ ಅಧ್ಯಕ್ಷ ಸಿದ್ದರಾಮಪ್ಪ, ತೋಟಗಾರಿಕೆ ಸಹಾಯಕ ಕೃಷಿ ನಿರ್ದೇಶಕ ವಿರೂಪಾಕ್ಷಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀನಿವಾಸ್ ತಾಲೂಕ್ ಪಂಚಾಯಿತಿ ಕಾರ್ಯನಿರ್ವಣಾಧಿಕಾರಿ ವಿಶ್ವನಾಥ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ರೈತರು ಸಭೆಯಲ್ಲಿ ಉಪಸ್ಥಿತರಿದ್ದರು.

## ಇಂದು ಸರ್ಕಾರಿ ಶಾಲೆಗಳನ್ನು ಉಳಿಸುವ ಕೆಲಸವನ್ನ ಎಲ್ಲರೂ ಸಹಾ ಮಾಡಬೇಕಾಗುತ್ತದೆ-ಗೋವಿಂದಪ್ಪ

» ಹೊಸದುರ್ಗ

ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಗಿಂತ ಯಾವುದರಲ್ಲೂ ಕಡಿಮೆ ಇಲ್ಲ,ಮಕ್ಕಳನ್ನ ಸರ್ಕಾರಿ ಶಾಲೆಗಳಲ್ಲಿ ಓದಿಸಿದರೆ ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗುತ್ತಾರೆ. ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸುವ ಮೂಲಕ ಇಂದು ಸರ್ಕಾರಿ ಶಾಲೆಗಳನ್ನು ಉಳಿಸುವ ಕೆಲಸವನ್ನ ಎಲ್ಲರೂ ಸಹಾ ಮಾಡಬೇಕಾಗುತ್ತದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಪೋಷಕರಿಗೆ ಕರೆ ನೀಡಿದರು.

ತಾಲೂಕಿನ ಬೆಲಗೂರು ಕಲ್ಕೆರೆ ಹಾಗೂ ಗರಗ ವಿಭಾಗದ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಬೆಲಗೂರು ಗ್ರಾಮದ ಶ್ರೀ ಮಾರುತಿ ಪೀಠದ ಗುರುಗಳಾದ ಶ್ರೀ ವಿಜಯ ಮಾರುತಿ ಶರ್ಮ ಗುರುಗಳ ದಿವ್ಯ ಸಾನಿಧ್ಯದಲ್ಲಿ ಹಮ್ಮಿಕೊಂಡಿದ್ದ ಉಚಿತ ಲೇಖನ ಸಾಮಾಗ್ರಿಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಹಾಗೂ ಇತರೆ ಪರಿಕರಗಳನ್ನು ವಿತರಿಸಿ ಮಾತನಾಡಿದರು.

ಕನ್ನಡ ಮಾಧ್ಯಮದಲ್ಲಿ ಓದಿದ ಮಕ್ಕಳಿಗೆ ಉದ್ಯೋಗ ಸಿಗುವುದಿಲ್ಲ ಎಂಬ ಅಂಶವನ್ನ ಪೋಷಕರು ಮನದಾಳದಿಂದ ಕಿತ್ತು ಹಾಕಿ ತಮ್ಮಲ್ಲಿರುವ ಅತಂಕವನ್ನು ಬಿಡಬೇಕು ಇಂತಹ ಮನಸ್ಥಿತಿ ಬೇಡ ಎಂದರು.ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಹೆಚ್.ಬಿ.ಮಂಜುನಾಥ್ ಮಾತನಾಡಿ ಮಾತಿನಂತೆ ಕೃತಿಯಿದ್ದರೇ ಮಾತ್ರ ಆದರ್ಶ ವ್ಯಕ್ತಿಗಳಾಗಬಹುದು. ಯಾವ ವಿದ್ಯಾರ್ಥಿಯೂ ದಡ್ಡನಲ್ಲ, ಪ್ರತಿಯೊಬ್ಬರಲ್ಲೂ ಒಂದೊಂದು ಪ್ರತಿಭೆಯಿರುತ್ತೆ . ಬುದ್ಧಿ ಸದ್ಬಳಕೆ ಮಾಡಿಕೊಂಡು, ಸತತ ಪರಿಶ್ರಮ ಪಟ್ಟರೇ ಪ್ರತಿಯೊಬ್ಬರೂ ಒಂದೊಂದು ಸಾಧನೆ ಮಾಡಬಹುದು. ಕೇವಲ ಅಂಕಗಳಿಕೆಯಲ್ಲಿ ವ್ಯಕ್ತಿತ್ವ ಅಳೆಯಲು ಸಾಧ್ಯವಿಲ್ಲ ಎಂದರು.ಶ್ರೀ ಮಾರುತಿ ಪೀಠದ ಗುರುಗಳಾದ ಶ್ರೀ ವಿಜಯ ಮಾರುತಿ ಶರ್ಮ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಬೆಂಗಳೂರು ತ್ಯಾಗರಾಜನಗರದ ಶ್ರೀ ಗಣೇಶ ಮಂದಿರಂ (ರಿ.) ಇವರ ವತಿಯಿಂದ ಉಚಿತ ನೋಟ್‌ಬುಕ್ ಹಾಗೂ ಇತರೆ ಪರಿಕರಿಗಳನ್ನು ವಿದ್ಯಾರ್ಥಿಗಳಿಗೆ ನೀಡಲಾಯಿತು.



## ಸರ್ಕಾರಿ ಐಟಿಐ ಕಾಲೇಜಿನಲ್ಲಿ ಗಿಡ ನೆಡುವ ಮೂಲಕ ಪರಿಸರ ಕಾರ್ಯಕ್ರಮ



» ಹೊಸದುರ್ಗ

ಪಟ್ಟಣದ ಸರ್ಕಾರಿ ಐಟಿಐ ಕಾಲೇಜಿನಲ್ಲಿ ತಾಲೂಕಿನ ಧರ್ಮಸ್ಥಳ ಹಾಲು ರಾಮೇಶ್ವರ ಯೋಜನಾ ಕಚೇರಿಯ ಹಾಲುರಾಮೇಶ್ವರ ವಲಯದ ವತಿಯಿಂದ ಪರಿಸರ ಕಾರ್ಯಕ್ರಮವನ್ನ ಆಯೋಜಿಸಲಾಗಿತ್ತು. ಧರ್ಮಸ್ಥಳ ಸಂಸ್ಥೆಯ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯೆ ಶ್ರೀಮತಿ ಸಿಂಧು ಗಿಡಗಳನ್ನು ನೆಡುವ ಮೂಲಕ ಕಾರ್ಯಕ್ರಮವನ್ನ ಉದ್ಘಾಟಿಸಿದರು.ನಂತರ ನಡೆದ ಸರಳ ಸಮಾರಂಭದಲ್ಲಿ ಸಂಪನ್ಮೂಲ ವ್ಯಕ್ತಿ ಸೋಮಶೇಖರ್ ಮಾತನಾಡಿ ವಿದ್ಯಾರ್ಥಿಗಳಿಗೆ ಪರಿಸರದಲ್ಲಿ ಇರುವ ಪ್ರತಿಯೊಂದು ಜೀವಿ ಗಳು ಒಂದಕೊಂದು ಅವಲಂಬಿಗಳಾಗಿರುತ್ತವೆ, ಯಾವುದೇ ಒಂದು ಜೀವಿ ವಿನಾಶ ಆದರೂ ಪರಿಸರ ಅಸಮತೋಲನ ವಾಗುತ್ತದೆ ಎಂದು ತಿಳಿಸಿ ವಿವಿಧ ವಿಚಾರ ಗಳ ಬಗ್ಗೆ ಮಾಹಿತಿ ನೀಡಿದರು, ಕ್ಷೇತ್ರ ಯೋಜನಾಧಿಕಾರಿ ಚಂದ್ರಶೇಖರ್ ಮಾತನಾಡಿ ಶಿಕ್ಷಣದ ಜೋತೆಗೆ ಪೂಜ್ಯರು ಇಂತಹ ಯೋಜನೆಯ ಮೂಲಕ ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದಾರೆ ಎಂದ ಅವರು ವಿದ್ಯಾರ್ಥಿಗಳಿಗೆ ಪರಿಸರದ ಬಗ್ಗೆ ಜಾಗೃತಿ ಮೂಡಿಸಿದರು, ಶಾಲಾ ಮುಖ್ಯ ಶಿಕ್ಷಕಿ ಶಾಂತಮ್ಮ. ವಲಯದ ಮೇಲ್ವಿಚಾರಕಿ ಸುಮಂಗಲ. ಕೃಷಿ ಅಧಿಕಾರಿ ಉಮೇಶ್. ಮತ್ತು ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಮತ್ತು ಗಣ್ಯರು ಸೇರಿ ವಿವಿಧ ಜಾತಿಯ ಗಿಡಗಳನ್ನು ನಡೆಲಾಯಿತು.

## ಸೂಚಕಲ್ ಗ್ರಾಮದಲ್ಲಿ ಹಸಿರು ಸೇನೆ ಗ್ರಾಮ ಘಟಕ ಉದ್ಘಾಟನೆ

» ಹೊಸದುರ್ಗ

ರೈತರು ಒಗ್ಗಟ್ಟಿನಿಂದ ಇದ್ದರೆ ತಾಲೂಕಿನಲ್ಲಿ ಅನೇಕ ಸಮಸ್ಯೆಗಳನ್ನು ಬಗೆರಿಸಬಹುದು ತಾಲೂಕಿನ ಶ್ರೀರಾಂಪುರ ಹೋಬಳಿಯ ತೆಂಗು ಬೆಳೆಗೆ ರೋಗದ ಬಗ್ಗೆ ವಿಷಾದ ವ್ಯಕ್ತಪಡಿಸಿದ ಅವರು ತೋಟಗಾರಿಕೆ ಇಲಾಖೆಯಲ್ಲಿ ರೈತರಿಗೆ ಔಷದ ಉಪಚಾರ ದೊರೆಯುತ್ತಿಲ್ಲ, ರೈತರ ಬಗ್ಗೆ ತೋಟಗಾರಿಕೆ ಇಲಾಖೆ ಗಮನ ಹರಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಾಧ್ಯಕ್ಷ ಸಿದ್ದವೀರಪ್ಪ ಒತ್ತಾಯಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ತಾಲೂಕಿನ ಶ್ರೀರಾಂಪುರ ಹೋಬಳಿ ಸೂಚಕಲ್ ಗ್ರಾಮದಲ್ಲಿ ನಡೆದ ಗ್ರಾಮ ಘಟಕ ಉದ್ಘಾಟನೆ ಯನ್ನು ಉದ್ಘಾಟಿಸಿ ಮಾತನಾಡಿದರು.



ಈ ಸಂಧರ್ಬದಲ್ಲಿ ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಸಿದ್ದವೀರಪ್ಪ ಈಚ್ಘಟ್ಟ, ಜಿಲ್ಲಾ ಅಧ್ಯಕ್ಷ ಕೆ ಟಿ ತಿಪ್ಪೇಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್ವರಪ್ಪ, ಹೊಳಲ್ಕೆರೆ ತಾಲೂಕ್ ರಂಗಸ್ವಾಮಿ, ಹೊಸದುರ್ಗ ತಾಲೂಕು ಅಧ್ಯಕ್ಷ ಚಿತ್ತಪ್ಪ ಗೌರವಾಧ್ಯಕ್ಷ ಬೋರೇಶ್, ಪ್ರಧಾನ ಕಾರ್ಯದರ್ಶಿ ನಿರಂಜನ್ ಮೂರ್ತಿ ಜೆ ನಾಗತಿಹಳ್ಳಿ ಸೇರಿದಂತೆ ರೈತ ಮುಖಂಡರುಗಳು ಉಪಸ್ಥಿತರಿದ್ದರು.

## ಜಾನಕಲ್ಲು ಗ್ರಾಮದಲ್ಲಿ ಪರಿಸರ ಜಾಗೃತಿ




ಹೊಸದುರ್ಗ: 'ಶ್ರೀ ಕ್ಷೇತ್ರ ಧರ್ಮಸ್ಥಳ ಹಾಲುರಾಮೇಶ್ವರ ಕಾರ್ಯ ಕ್ಷೇತ್ರದ ಜಾನಕಲ್ ವಲಯದ ವತಿಯಿಂದ ತಾಲೂಕಿನ ಜಾನಕಲ್ಲು ಗ್ರಾಮದ ಶಾರದಾ ಇಂಟರ್‌ನ್ಯಾಷನಲ್ ಸ್ಕೂಲ್ ನಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪರಿಸರ ಜಾಗೃತಿ ಮಾಹಿತಿ ಹಾಗೂ ಗಿಡ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ರಿಯಾಜ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪರಿಸರದ ಬಗ್ಗೆ ಹಾಗೂ ಪರಿಸರ ಸಂರಕ್ಷಣೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ತಾಲೂಕಿನ ಯೋಜನಾಧಿಕಾರಿ ಚಂದ್ರಶೇಖರ್ ಯೋಜನೆಯು ನಡೆದು ಬಂದ ದಾರಿ ಯೋಜನೆಯ ಆರ್ಥಿಕ ಸೌಲಭ್ಯ ಸಮುದಾಯ ಅಭಿವೃದ್ಧಿ ನಿರ್ಗತಿಕರಿಗೆ ಮಾಶಾಸನ ಸುಜ್ಞಾನ ನಿಧಿ ಶಿಷ್ಯವೇತನ ಜ್ಞಾನ ದೀಪ ಶಿಕ್ಷಕಿಯರ ಹೀಗೆ ಹತ್ತಾರು ಸಮಾಜ ಮುಖಿ ಸೇವೆಯನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಾ ಬರುತ್ತಿದೆ ಎಂದು ಯೋಜನೆಯ ಬಗ್ಗೆ ಸವಿಸ್ತಾರ ಮಾಹಿತಿಯನ್ನು ನೀಡಿದರು. ಜಾಗೃತಿಯ ಬಗ್ಗೆ ನಾಗರಿಕರಿಗೆ ಹಾಗೂ ಮಕ್ಕಳಿಗೆ ಜಾಗೃತಿ ಮೂಡಿಸುವ ಬಗ್ಗೆ ತಿಳಿಸಲಾಯಿತು. ವಲಯದ ಮೇಲ್ವಿಚಾರಕ ಲೋಕೇಶ್, ಕೃಷಿ ಮೇಲ್ವಿಚಾರಕ ಉಮೇಶ್, ಒಕ್ಕೂಟದ ಅಧ್ಯಕ್ಷೆ ರೇಣುಕಾ ಸೇರಿದಂತೆ ಶಾಲೆಯ ಶಿಕ್ಷಕ ವೃಂದದವರು ಎಸ್ ಡಿ ಎಂ ಸಿ ಸದಸ್ಯರು ಹಾಗೂ ಮುದ್ದು ಮಕ್ಕಳು ಸೇವಾ ಪ್ರತಿನಿಧಿ ಸಿ ಎಸ್ ಸಿ ಸೇವಾದಾರರು ಉಪಸ್ಥಿತರಿದ್ದರು.

## ಹೊಸದುರ್ಗ: ಇಂದು ವಿದ್ಯುತ್ ಇಲ್ಲ

ಹೊಸದುರ್ಗ: ತಾಲೂಕಿನ ಮಧುರೆ 220/66 ಕೆ.ವಿ. ವಿದ್ಯುತ್ ಕೇಂದ್ರದಲ್ಲಿ ನಿರ್ವಹಣಾ ಕಾರ್ಯನಿರ್ವಹಿಸುತ್ತಿರುವುದರಿಂದ ಜೂನ್ 26 ರಂದು ಗುರುವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯ ವರೆಗೆ ತಾಲೂಕಿನ ಎಲ್ಲಾ 66/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಹೊಸದುರ್ಗ ಪಟ್ಟಣ ಸೇರಿದಂತೆ ತಾಲೂಕಿನ ಎಲ್ಲಾ ಗ್ರಾಮಗಳು ಮತ್ತು ನೀರಾವರಿ ಸ್ಥಾವರಗಳ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಯ ಉಂಟಾಗಲಿದ್ದು ಸಾರ್ವಜನಿಕರು ಹಾಗೂ ರೈತರು ಸಹಕರಿಸಬೇಕೆಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಹಕ ಇಂಜಿನಿಯರ್ ಕಿರಣ್‌ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ


### ಪ್ರಮುಖ ಸುದ್ದಿ

## ಜಿಲ್ಲೆಯಲ್ಲಿಯೇ ಹೊಸದುರ್ಗ ಡಿಜಿಟಲಿಕರಣದಲ್ಲಿ ಪ್ರಥಮ

» ಹೊಸದುರ್ಗ

ಹೊಸದಾಗಿ ಅರ್ಜಿ ಹಾಕಿದ ತಕ್ಷಣ ರೆಕಾರ್ಡ್ ರೂಮಿನಲ್ಲಿ ಜನರು ಕೇಳಿದ ದಾಖಲೆ ಸಿಗುತ್ತದೆ. ತಹಶೀಲ್ದಾರ್ ಇಲಾಖೆಯ ಎಲ್ಲಾ ನೌಕರರನ್ನು ಜೊತೆಗೂಡಿಸಿಕೊಂಡು ಚಿತ್ರದುರ್ಗ ಜಿಲ್ಲೆಯಲ್ಲಿಯೇ ಪ್ರಥಮವಾಗಿ ಎಲ್ಲಾ ದಾಖಲೆಗಳನ್ನು ಡಿಜಿಟಲಿಕರಣ ಮಾಡಿದ್ದು, ಇದುವರೆಗೂ 8.ಲಕ್ಷ ಪೇಜುಗಳನ್ನ ಆನ್ಲೈನ್ ನಲ್ಲಿ ಎಂಟ್ರಿ ಮಾಡಲಾಗಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಭೂ-ಸುರಕ್ಷಾ ಯೋಜನೆಯಲ್ಲಿ ಗಣಕೀಕರಣ ದಾಖಲೆಗಳನ್ನುಸಾರ್ವಜನಿಕರಿಗೆನೀಡಲುಚಾಲನೆ ನೀಡಿ ಮಾತನಾಡಿದ ಅವರು, ವ್ಯವಸ್ಥಿತವಾಗಿ ಕಂದಾಯ ಇಲಾಖೆ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದೆ. ಕೃಷ್ಣಭೈರೇಗೌಡ ಕಂದಾಯ ಸಚಿವರಾದ ಮೇಲೆ ಇಲಾಖೆ ಜನರಿಗೆ ಹತ್ತಿರದಿಂದ ಕೆಲಸ ಮಾಡಬೇಕು, ಒಳ್ಳೆಯ ಸೇವೆಯನ್ನು



ನೀಡಬೇಕು, ಜನಸಾಮಾನ್ಯರ ಎಲ್ಲಾ ಕೆಲಸ ಕಾರ್ಯಗಳು ಯಶಸ್ವಿಯಾಗಿ ನಡೆಯಬೇಕೆಂದು ಯೋಜನೆಯನ್ನು ಅನುಷ್ಠಾನಕ್ಕೆ ತಂದಿದ್ದಾರೆ ಎಂದರು.

ತಾಲೂಕು ಕಚೇರಿಯಲ್ಲಿರುವ ಹಳೆಯ ದಾಖಲೆಗಳನ್ನು ಸಂರಕ್ಷಣೆ ಮಾಡಿ, ರೈತರಿಗೆ ಬೇಗನೆ ಸಿಗುವಂತಹ ಯೋಜನೆಯಾಗಿದೆ. ಡಿಜಿಟಲಿಕರಣಗೊಂಡ ದಾಖಲೆಗಳು ಕೇಳಿದ ತಕ್ಷಣವೇ ಕೈಗೆ ಸಿಗಲಿವೆ. ಇದರಿಂದಾಗಿ ಜನರು ಕಚೇರಿಗೆ ಪದೇಪದೇ ಅಲೆಯುವುದು ತಪ್ಪುತ್ತದೆ. ರೈತರು ಏನೇ ದಾಖಲಾತಿ ಬೇಕಾದರೂ, ಆನ್ಲೈನಲ್ಲಿ ಅರ್ಜಿ ಹಾಕಬೇಕು. ಆನ್ಲೈನ್ ನಲ್ಲಿ ಮಾಹಿತಿ ಪಡೆದುಕೊಳ್ಳಬೇಕು. ಇಂತಹ ಸುರಕ್ಷಿತವಾದ ಕೆಲಸವನ್ನು ಮಾಡಿಕೊಟ್ಟಿದ್ದಾರೆ. ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಿ ಎಂದು ತಿಳಿಸಿದರು.

ತಹಶೀಲ್ದಾರ್ ತಿರುಪತಿ ಪಾಟೀಲ್ ಮಾತನಾಡಿ, ದಾಖಲೆಗಳನ್ನು ತಿದ್ದಿ, ತಿಡುವುದು ನಡೆಯುತ್ತಿತ್ತು. ಕಂದಾಯ ಸಚಿವರು ಭೂ-ಸುರಕ್ಷಾ ಯೋಜನೆ ಅಡಿಯಲ್ಲಿ ರೆಕಾರ್ಡ್ಸ್ ಗಳನ್ನು ದಾಖಲೀಕರಣ ಗೊಳಿಸಬೇಕೆಂದು ಯೋಜನೆಯನ್ನು ಜಾರಿಗೆ ತಂದಿದ್ದಾರೆ. ಹೊಸದುರ್ಗ ತಾಲೂಕಿನಲ್ಲಿ ಬಹಳಷ್ಟು ಸಮಸ್ಯೆಯಿತ್ತು. ಇದೀಗ, ಯಾವುದೇ ಲೋಪವಾದದಂತೆ ರೈತರಿಗೆ ದಾಖಲೆಗಳನ್ನು ನೀಡಬಹುದು. ಅದರಂತೆ ಇನ್ನು ಮುಂದೆ ಡಿಜಿಟಲ್ ದಾಖಲೆಗಳನ್ನು ನೀಡುತ್ತೇವೆ.

### ಫಾಸ್ಟ್ ನ್ಯೂಸ್

## ಜು.02ಕ್ಕೆ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರುಗಳ ಸಂಯುಕ್ತಾಶ್ರಯದಲ್ಲಿ ಡಾ.ಫ.ಗು.ಹಳಕಟ್ಟಿಯವರ ಜನ್ಮದಿನದ ಅಂಗವಾಗಿ "ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ"ಯನ್ನು ಜುಲೈ 02ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ.ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಶಾಸಕರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ, ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್. ಮಂಜುನಾಥ್, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಹಾಗೂ ಗಣ್ಯರು ಭಾಗವಹಿಸುವರು. ರಾಜ್ಯಪ್ರಶಸ್ತಿ ಪುರಸ್ಕೃತರು ಹಾಗೂ ಬಾಪೂಜಿ ಪದವಿಪೂರ್ವ ಕಾಲೇಜು ಪ್ರಾಚಾರ್ಯೆ ಡಾ.ಎನ್. ಮಮತಾ ಉಪನ್ಯಾಸ ನೀಡುವರು. ಚಳ್ಳಕೆರೆಯ ಶ್ರೀನಿವಾಸ್ ಮತ್ತು ತಂಡದವರಿಂದ ಗೀತಗಾಯನ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ ತಿಳಿಸಿದ್ದಾರೆ.

## ರಾಜ್ಯ ಸಂಚಾಲಕರಾಗಿ ಗಿರೀಶ ಎಸ್ ಎಂ

» ಹೊಸದುರ್ಗ

ಚಿತ್ರದುರ್ಗ ಜಿಲ್ಲೆಯ ಪ್ರತಿಷ್ಠಿತ ಸಾಹಿತ್ಯ ಸಂಸ್ಥೆಗಳಲ್ಲಿ ಒಂದಾದ ಸೂಲೇನಹಳ್ಳಿಯ ತನುಶ್ರೀ ಪ್ರಕಾಶನ ಸಂಸ್ಥೆಯ ನೂತನ ರಾಜ್ಯ ಸಂಚಾಲಕರಾಗಿ ಗಿರೀಶ ಎಸ್ ಎಂ ತೊಣಚೇನಹಳ್ಳಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಸಂಸ್ಥೆಯ ಮುಖ್ಯಸ್ಥ ರಾಜು ಸೂಲೇನಹಳ್ಳಿ ಪ್ರಕಟಣೆಯಲ್ಲಿ ತಿಳಿಸಿದರು. ಈ ಕುರಿತು ಮಾತನಾಡಿದ ಗಿರೀಶ ಎಸ್ ಎಂ ತೊಣಚೇನಹಳ್ಳಿ ಕನ್ನಡ ನಾಡು ನುಡಿ ಸೇವೆಗೆ ನಾನು ಸದಾ ಬದ್ಧನಿದ್ದು ಹಿರಿಯರ ಮಾರ್ಗದರ್ಶನದಲ್ಲಿ ನೀಡಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿಭಾಯಿಸುತ್ತೇನೆ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹಾಗೂ ತಾಲೂಕು ಘಟಕಗಳಿಗೆ ಸಂಚಾರ ಮಾಡಿ ಸಂಸ್ಥೆಯನ್ನು ಪ್ರಬಲಗೊಳಿಸುವಲ್ಲಿ ಅವಿರತವಾಗಿ ಶ್ರಮಿಸಿವೆ ಎಂದರು

## ಪರಶುರಾಮಪುರ: ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

» ಚಳ್ಳಕೆರೆ

ಬೆಂಗಳೂರು ವಿದ್ಯುತ್ ಸಬರಾಜುಕಂಪನಿಯ ಚಳ್ಳಕೆರೆ ಉಪವಿಭಾಗ ವ್ಯಾಪ್ತಿಯ ಪರಶುರಾಮಪುರ ವಿದ್ಯುತ್ ವಿತರಣಾ ಕೇಂದ್ರ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಪ್ರಯುಕ್ತ ಜೂನ್26ರ ಗುರುವಾರ ಬೆಳಗ್ಗೆ 10ರಿಂದ ಸಂಜೆ 5ರ ತನಕ ವಿದ್ಯುತ್ ಸರಬರಾಜು ಸ್ಥಗಿತಗೊಳಿಸಲಾಗುವುದು ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರ ಜಿ.ಶಿವಪ್ರಸಾದ್ ತಿಳಿಸಿದ್ದಾರೆ. ಜಾನೂರು, ಪಗಡಲಬಂಡೆ, ಸಿದ್ದೇಶ್ವರದುರ್ಗ, ಪರಶುರಾಮಪುರ, ದೊಡ್ಡಚೆಲ್ಲೂರು, ಚೌಳೂರು, ಪಿ.ಮಹದೇವಪುರ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ತೊಂದರೆಯಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಮನವಿ ಮಾಡಿದ್ಧಾರೆ.


## ಇಂಜಿನಿಯರಿಂಗ್ ಕಾಲೇಜು: ಯುಜಿಸಿಇಟಿ ಸೀಟು ಹಂಚಿಕೆ ಮಂಥನ ಕಾರ್ಯಕ್ರಮ

» ಚಳ್ಳಕೆರೆ

ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಜೂನ್28ರ ಶನಿವಾರ ಬೆಳಗ್ಗೆ 9.30ರಿಂದ ಮಧ್ಯಾಹ್ನ1.30ರ ತನಕ ಕಾಲೇಜಿನಲ್ಲಿ ಯುಜಿಸಿಇಟಿ-2025 ಸೀಟು ಹಂಚಿಕೆ ಮಂಥನ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಾಂಶುಪಾಲ ಡಾ.ಎಂ.ಎಂ.ಬೇನಾಲ್ ತಿಳಿಸಿದ್ಧಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮಾರ್ಗದರ್ಶನದಲ್ಲಿ ನಡೆಯಲಿರುವ ಈ ಕಾರ್ಯಗಾರದಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರು ಆಗಮಿಸಿ ಸೂಕ್ತಸಲಹೆ, ಸಹಕಾರವನ್ನು ಪಡೆಯುವಂತೆ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗೆ 94496 96677, 80737 76875ಗೆ ಸಂಪರ್ಕಿಸಲು ಮನವಿ ಮಾಡಿದ್ಧಾರೆ.

## ಫಾಸ್ಟ್ ನ್ಯೂಸ್

### ಕೋಟೆ ಆವರಣದ ಬನಶಂಕರಿ ದೇವಸ್ಥಾನದಲ್ಲಿ ಕಲ್ಯಾಣೋತ್ಸವ



» ಚಿತ್ರದುರ್ಗ

ಆಷಾಡ ಮಾಸದ ಮುನ್ನ ದಿನ ಬುಧವಾರ ಅಮಾವಾಸೆಯಂದು ಐತಿಹಾಸಿಕ ಚಿತ್ರದುರ್ಗದ ಕೋಟೆ ಆವರಣದಲ್ಲಿರುವ ಬನಶಂಕರಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಪ್ರತಿ ವರ್ಷದಂತೆ ಈ ವರ್ಷವೂ ಶ್ರದ್ಧಾಭಕ್ತಿಯಿಂದ ಕಲ್ಯಾಣೋತ್ಸವ ನಡೆಯಿತು. ಸುಗಂಧರಾಜ, ಮಲ್ಲಿಗೆ, ಸೇವಂತಿಗೆ, ಕನಕಾಂಬರ, ಹಸಿರುಪತ್ರೆ, ಗುಲಾಬಿ, ಹೊಂಬಾಳೆಯಿಂದ ಬನಶಂಕರಿ ಅಮ್ಮನನ್ನು ಅಲಂಕರಿಸಲಾಗಿತ್ತು. ಬೆಳಗಿನಿಂದ ಸಂಜೆಯತನಕ ಕೋಟೆ ವಾಯುವಿಹಾರಿಗಳ ಸಂಘದ ಅಧ್ಯಕ್ಷ ಆರ್.ಸತ್ಯಣ್ಣ ಸೇರಿದಂತೆ ನೂರಾರು ಭಕ್ತರು ಧಾವಿಸಿ ಬನಶಂಕರಿ ಅಮ್ಮನ ಕಲ್ಯಾಣೋತ್ಸವವನ್ನು ಕಣ್ತುಂಬಿಕೊಂಡರು.ಭಕ್ತರಿಗೆ ಎರಡು ದಿನಗಳ ಕಾಲ ಅನ್ನಸಂತರ್ಪಣೆ ಹಾಗೂ ಪ್ರಸಾದ ವಿನಿಯೋಗಿಸಲಾಯಿತು.

### ಹೊನ್ನೇನಹಳ್ಳಿಯಲ್ಲಿ ಪರಿಸರ ಜಾಗೃತಿ ಮಾಹಿತಿ ಕಾರ್ಯಕ್ರಮ

» ಹೊಸದುರ್ಗ

ತಾಲೂಕಿನ ಹಾಲು ರಾಮೇಶ್ವರ ವಲಯದ ಹೊನ್ನೇನಹಳ್ಳಿ ಕಾರ್ಯಕ್ಷೇತ್ರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಪರಿಸರ ಜಾಗೃತಿ ಮಾಹಿತಿ ಕಾರ್ಯಕ್ರಮ ಜರುಗಿತು. ಅಧ್ಯಕ್ಷತೆಯನ್ನು ಒಕ್ಕೂಟದ ಉಪಾಧ್ಯಕ್ಷ ರಂಗಮ್ಮ ವಹಿಸಿದ್ದರು. ಪ್ರಸ್ತಾವಿಕವಾಗಿ ಮಾತನಾಡಿದ ಕೃಷಿ ಮೇಲ್ವಿಚಾರಕ ಉಮೇಶ್ ಪೂಜ್ಯರು ಪರಿಸರ ಸಂರಕ್ಷಣೆಗೆ ನೀಡಿದ ಮಹತ್ವದ ಬಗ್ಗೆ ವಿವರಿಸಿದರು. ವಿದ್ಯಾರ್ಥಿಗಳಿಗೆ ತಮ್ಮ ತಮ್ಮ ಹುಟ್ಟುಹಬ್ಬದ ದಿನ ಗಿಡ ನಾಟಿ ಮಾಡುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ಒಕ್ಕೂಟದ ಸದಸ್ಯರು, ಶಾಲಾ ಶಿಕ್ಷಕರ ವೃಂದ, ಪುಟಾಣಿ ಮಕ್ಕಳು ಹಾಗೂ ಸೇವಾಪ್ರತಿನಿಧಿ ಭಾಗವಹಿಸಿದ್ದರು.

### ಇ-ಆಸ್ತಿ ತಂತ್ರಾಂಶದಲ್ಲಿ ಹೊಸ ಸೌಲಭ್ಯ ಪಡೆಯಲು ಅವಕಾಶ

» ದಾವಣಗೆರೆ

ಚನ್ನಗಿರಿ ಪಟ್ಟಣದ ಸಾರ್ವಜನಿಕರು ಇ-ಆಸ್ತಿ ತಂತ್ರಾಂಶದಲ್ಲಿ ಹೊಸ ಸೌಲಭ್ಯಗಳನ್ನು ಪಡೆಯಬಹುದಾಗಿದೆ. ಕರ್ನಾಟಕ ಒನ್ ಕೇಂದ್ರಗಳಲ್ಲಿ ವಿದ್ಯುನ್ಮಾನ ನಾಗರೀಕ ವಿತರಣಾ ನಿರ್ದೇಶನಾಲಯವು ನಿಗಧಿಪಡಿಸಲಾಗಿರುವ ಶುಲ್ಕವನ್ನು ಪಾವತಿಸಿ ಸಾರ್ವಜನಿಕರು ಇ-ಆಸ್ತಿ ತಂತ್ರಾಂಶದಲ್ಲಿ ಖಾತಾ ಸೃಜನೆಗೆ ಅರ್ಜಿ ಸಲ್ಲಿಸಬಹುದು. ಇ-ಆಸ್ತಿ ತಂತ್ರಾಂಶವನ್ನು ಕಾವೇರಿ-2.0 ತಂತ್ರಾಂಶದೊಂದಿಗೆ ಜೋಡಣೆಗೊಳಿಸಲಾಗಿದ್ದು,ಇ-ಆಸ್ತಿತಂತ್ರಾಂಶದಲ್ಲಿ ಏಪ್ರಿಲ್ 2024 ರ ನಂತರದ ನೋಂದಾಯಿತ ದಾಖಲೆಗಳು ಮತ್ತು ಋಣಭಾರರಾಹಿತ್ಯ ಪ್ರಮಾಣ ಪತ್ರಗಳನ್ನು ಜೋಡಣೆ ಮಾಡಲಾಗಿದ್ದು ವೀಕ್ಷಿಸಬಹುದು. ಸಾರ್ವಜನಿಕರು ಖಾತಾ ಸೃಜನೆಗೆ ಅರ್ಜಿ ಸಲ್ಲಿಸುವಾಗ ದಿನಾಂಕ: 01-04-2024 ರ ನಂತರದ ನೋಂದಾಯಿತ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವ ಅವಶ್ಯಕತೆ ಇರುವುದಿಲ್ಲ. ನೋಂದಾಯಿತ ಪತ್ರ ಮತ್ತು ಋಣಭಾರರಾಹಿತ್ಯ ಪ್ರಮಾಣ ಪತ್ರಗಳ ಸಂಖ್ಯೆಯನ್ನುದಾಖಲಿಸಿ,ವಿವರಗಳನ್ನುಪರಿಶೀಲಿಸಿ ಸರಿಯಿರುವ ಬಗ್ಗೆ ಖಚಿತಪಡಿಸಿಕೊಂಡು ಅರ್ಜಿ ಸಲ್ಲಿಸಬೇಕು. ಇ-ಆಸ್ತಿ ತಂತ್ರಾಂಶದಲ್ಲಿ ಕಲ್ಪಿಸಲಾಗಿರುವ ಸೌಲಭ್ಯಗಳನ್ನು ಬಳಕೆ ಮಾಡಿಕೊಂಡು ಇ-ಆಸ್ತಿ ಖಾತಾ ದಾಖಲೆಗಳನ್ನು ಪಡೆಯಲು ಅರ್ಜಿಸಲ್ಲಿಸಬಹುದೆಂದು ಚನ್ನಗಿರಿ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಮಾದಕ ದ್ರವ್ಯ ವಿರೋಧಿ ದಿನಾಚರಣೆ: ಇಂದು ಜಾಥಾ

» ದಾವಣಗೆರೆ

ದಾವಣಗೆರೆ ಜಿಲ್ಲಾ ಪೊಲೀಸ್ ವತಿಯಿಂದ ಜೂನ್ 26 ರಂದು ಬೆಳಗ್ಗೆ 9.30ಕ್ಕೆ ನಗರದ ಹೈಸ್ಕೂಲ್ ಮೈದಾನದಲ್ಲಿ ಅಂತರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನಾಚರಣೆ ಅಂಗವಾಗಿ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಜಾಥಾವು ಹೈಸ್ಕೂಲ್ ಮೈದಾನದಿಂದ ರೇಣುಕಾ ಮಂದಿರವನ್ನು ತಲುಪಿ, ರೇಣುಕಾ ಮಂದಿರ ವೃತ್ತದಲ್ಲಿ ಬೀದಿ ನಾಟಕವನ್ನು ಪ್ರದರ್ಶಿಸಲಾಗುವುದು. ನಂತರ ರೇಣುಕಾ ಮಂದಿರದಲ್ಲಿ ಮಾದಕ ದ್ರವ್ಯ ವಿರೋಧಿ ಜಾಗೃತಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

## ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ದ್ವೈಮಾಸಿಕ ಸಭೆ

# ಜು.12ಕ್ಕೆ ಲೋಕ ಅದಾಲತ್, ಮಾದಕ ವಸ್ತು ಸಾಗಣೆ ತಡೆಗೆ ಸ್ಕ್ಯಾನರ್ ಅಳವಡಿಕೆಗೆ ಚಿಂತನೆ; ನಾ. ವೇಲಾ

» ದಾವಣಗೆರೆ

ಜಾಗತಿಕವಾಗಿ ಅತೀ ಹೆಚ್ಚು ಜನಸಂಖ್ಯೆ ಹೊಂದಿರುವ ದೇಶ ನಮ್ಮದಾಗಿದ್ದು ಯುವ ಸಂಪತ್ತನ್ನು ಕಾಪಾಡಿಕೊಳ್ಳಲು ಮಾದಕ ವಸ್ತುಗಳಿಂದ ದೂರವಿರಲು ಇದರ ಸಾಗಾಟ ಮತ್ತು ಮಾರಾಟ ತಡೆಗೆ ಕಟ್ಟುನಿಟ್ಟಿನ ಕ್ರಮ ಜರುಗಿಸುವುದು ಅನಿವಾರ್ಯವಾಗಿದೆ. ಈ ನಿಟ್ಟಿನಲ್ಲಿ ರೈಲ್ವೆ ನಿಲ್ದಾಣ ಮತ್ತು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳಲ್ಲಿ ಮಾದಕ ವಸ್ತುಗಳ ಪತ್ತೆಗೆ ಸ್ಕ್ಯಾನರ್ ಅಳವಡಿಕೆ ಪರಿಹಾರವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ವೇಲಾ ಡಿ.ಕೆ. ಅಭಿಪ್ರಾಯಪಟ್ಟರು.

ಅವರು ಬುಧವಾರ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ನಡೆದ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ದ್ವೈಮಾಸಿಕ ಸಭೆ, ಮಾದಕ ವಸ್ತುಗಳ ತಡೆ, ಪೋಕ್ಸೊ ತಡೆ, ಭಿಕ್ಷಾಟನೆ ತಡೆ ಸೇರಿದಂತೆ ಬಾಲನ್ಯಾಯ ಕುರಿತಂತೆ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ಮಾದಕ ವಸ್ತುಗಳನ್ನು ರೈಲ್ವೆ ಮತ್ತು ಬಸ್‌ಗಳ ಮೂಲಕ ಸಾಗಣೆ ಮಾಡುತ್ತಿದ್ದು ಇದನ್ನು ಪತ್ತೆಹಚ್ಚಲು ಸ್ಕ್ಯಾನರ್ ಅಳವಡಿಕೆ ಮಾಡಲು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರೊಂದಿಗೆ ಚರ್ಚೆ ಮಾಡಿದರು. ಇದಕ್ಕೆ ಈ ಬಗ್ಗೆ ಪರಿಶೀಲನೆ ನಡೆಸಿ ಅಗತ್ಯ ಅನುದಾನವನ್ನು ನೀಡುವ ಮೂಲಕ ಸಾಧನ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.



ಜುಲೈ 12 ಕ್ಕೆ ಲೋಕ ಅದಾಲತ್; ಬರುವ ಜುಲೈ 12 ಕ್ಕೆ ಎಲ್ಲಾ ನ್ಯಾಯಾಲಯಗಳಲ್ಲಿ ಲೋಕ ಅದಾಲತ್ ನಡೆಯಲಿದ್ದು ರಾಜಿಯಾಗಬಲ್ಲ ಎಲ್ಲಾ ಪ್ರಕರಣಗಳನ್ನು ಇತ್ಯರ್ಥಕ್ಕೆ ಕ್ರಮ ಕೈಗೊಳ್ಳಲಾಗುತ್ತದೆ. ಆಯಾ ಇಲಾಖೆಯವರು ಇದಕ್ಕೆ ಸಂಪೂರ್ಣ ಸಹಕಾರ ನೀಡುವ ಮೂಲಕ ಹೆಚ್ಚು ಪ್ರಕರಣಗಳನ್ನು ಇತ್ಯರ್ಥ ಮಾಡಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿ ಕಕ್ಷಿದಾರರೂ ಸಹ ಇದರ ಉಪಯೋಗ ಪಡೆದುಕೊಳ್ಳುವ ಮೂಲಕ ಶೀಘ್ರ ನ್ಯಾಯದಾನ ಪಡೆಯಬೇಕೆಂದು ಜಿಲ್ಲಾ ನ್ಯಾಯಾಧೀಶರು ತಿಳಿಸಿದರು.

ಬಾಲ್ಯ ವಿವಾಹ, ಪೋಕ್ಸೋ ತಡೆಗೆ ಒತ್ತು ನೀಡಿ; ಪೋಕ್ಸೋ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿದೆ, 2025 ರ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ದಾವಣಗೆರೆ 9, ಹರಿಹರ 1, ಹೊನ್ನಾಳಿ 2, ಚನ್ನಗಿರಿ 6 ಪ್ರಕರಣಗಳು ಸೇರಿ ಒಟ್ಟು 18 ಪ್ರಕರಣಗಳು ದಾಖಲಾಗಿವೆ.

ಬಾಲ್ಯ ವಿವಾಹ ಮತ್ತು ಪೋಕ್ಸೋ ತಡೆಗಟ್ಟಲು ಮಕ್ಕಳಿಗೆ ಶಾಲೆಗಳಲ್ಲಿ ಜಾಗೃತಿ ಮೂಡಿಸುವ ಕೆಲಸ ನಿರಂತರವಾಗಿ ಮಾಡಬೇಕಾಗಿದ್ದು ಡಿಡಿಪಿಐ ಕ್ರಮ ಕೈಗೊಳ್ಳಲು ತಿಳಿಸಿದರು.

ಹಾಸ್ಟೆಲ್ ವಿದ್ಯಾರ್ಥಿಗಳ ವಿವರ; ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಎಲ್ಲಾ ಇಲಾಖೆಗಳಲ್ಲಿನ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸ ಮುಂದುವರೆಸಿರುವ ಕುರಿತು ವರದಿಯನ್ನು ಸಿದ್ದಪಡಿಸಿ ನೀಡಬೇಕು. ವಿದ್ಯಾರ್ಥಿನಿಯರು ವ್ಯಾಸಂಗ ಮುಂದುವರೆಸಿರುವ ಬಗ್ಗೆ ಮತ್ತು ಕೈಗೊಂಡಿರುವ ಉದ್ಯೋಗದ ಬಗ್ಗೆಯು ಮಾಹಿತಿ ಸಂಗ್ರಹಿಸಿ ವರದಿ ನೀಡಲು ತಿಳಿಸಿದರು.

ಬಾಲ ಭವನ ಮತ್ತು ಸಂಘರ್ಷಕ್ಕೆ ಒಳಗಾಗಿರುವ ಮಕ್ಕಳ ಪಾಲನೆ ಪೋಷಣೆ ಕುರಿತಂತೆ ಅವರ ಪೋಷಣೆಗಾಗಿ ಕೈಗೊಂಡಿರುವ ಕ್ರಮಗಳು, ನಿರಾಶ್ರಿತ ಪರಿಹಾರ ಕೇಂದ್ರದಲ್ಲಿನ ನಿವಾಸಿಗಳ ಕುಟುಂಬಸ್ಥರನ್ನು ಪತ್ತೆಹಚ್ಚಿ ಅವರ ಕುಟುಂಬದವರ ಬಳಿ ಕಳುಹಿಸುವ ವ್ಯವಸ್ಥೆ ಜೊತೆಗೆ ಯಾರು ಪೋಷಕರನ್ನು ನೋಡಿಕೊಳ್ಳುವುದಿಲ್ಲ ಅದನ್ನು ಹಿರಿಯ ನಾಗರಿಕರ ಕಾಯ್ದೆಯಡಿ ಪರಿಶೀಲನೆ ನಡೆಸಲು ಸೂಚನೆ ನೀಡಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಮಾತನಾಡಿ ಇತ್ತೀಚೆಗೆ ನಗರದ ಶ್ರೀರಾಮನಗರದಲ್ಲಿನ ಮೆಟ್ರಿಕ್ ನಂತರದ ಬಿಸಿಎಂ ಹಾಸ್ಟೆಲ್‌ಗೆ ರಾತ್ರಿ 10 ರ ಸಮಯದಲ್ಲಿ ಅನಿರೀಕ್ಷಿತ ಭೇಟಿ ನೀಡಲಾಗಿತ್ತು. ಈ ವೇಳೆ ಹಾಸ್ಟೆಲ್ ವಾರ್ಡನ್ ಇರಲಿಲ್ಲ, ಈ ಬಗ್ಗೆ ವಿದ್ಯಾರ್ಥಿಗಳನ್ನು ಕೇಳಿದಾಗ ಬಂದು ಹೋಗುತ್ತಾರೆ ಎಂದು ಮಾಹಿತಿ ನೀಡಿದರು. ವಾರ್ಡನ್ ಹಾಸ್ಟೆಲ್‌ನಲ್ಲಿ ಇದ್ದು ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಕುರಿತು ಗಮನಿಸಬೇಕು. ಆದರೆ ಇವರು ತಮ್ಮ ಕರ್ತವ್ಯಲೋಪವೆಸಗುತ್ತಿದ್ದಾರೆ. ನಿಯಂತ್ರಿಸುವ ವಾರ್ಡನ್ ಇಲ್ಲದಿದ್ದಲ್ಲಿ ವಿದ್ಯಾರ್ಥಿಗಳ ನಿಗಾತಪ್ಪಲಿದೆ. ಇದರಿಂದ ಅನೇಕ ದೂರುಗಳಿಗೆ ಆಸ್ಪದವಾಗಲಿದ್ದು ಈ ರೀತಿ ಆಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಹೆಚ್ಚುವರಿ ರಕ್ಷಣಾಧಿಕಾರಿ ಮಂಜುನಾಥ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್. ಅರುಣ್‌ಕುಮಾರ್, ಜಿಲ್ಲಾ ಸರ್ಕಾರಿ ವಕೀಲರಾದ ಶಾಮನೂರು ಪ್ರಕಾಶ್, ವಕೀಲರ ಸಂಘದ ಕಾರ್ಯದರ್ಶಿ ಬಸವರಾಜ್ ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನಗರದ ವಿವಿಧ ವಾರ್ಡ್‌ಗಳಲ್ಲಿ ಸ್ವಚ್ಛತೆ ಕಾಪಾಡಿ

» ಚಳ್ಳಕೆರೆ

ನಗರಸಭೆಯ ಸಾಮಾನ್ಯಸಭೆ ಬುಧವಾರ ಪ್ರಭಾರೆ ಅಧ್ಯಕ್ಷೆ ಸಿ.ಕವಿತಾಬೋರಯ್ಯ ಅಧ್ಯಕ್ಷತೆಯಲ್ಲಿ ನಡೆದಿದ್ದು, ನಗರದ ಅಭಿವೃದ್ದಿ ಹಾಗೂ ಸ್ವಚ್ಛತೆ ಕುರಿತಂತೆ ಚುನಾಯಿತ ಎಲ್ಲಾ ಸದಸ್ಯರು ಸುಧೀರ್ಘ ಚರ್ಚೆ ನಡೆಸಿದರು.

ಪ್ರಾರಂಭದಲ್ಲಿ ಆಡಳಿತಮಂಡಳಿತ ಎಲ್ಲಾ ಸದಸ್ಯರು,ಸಿಬ್ಬಂದಿಯನ್ನುಸ್ವಾಗತಿಸಿ ಮಾತನಾಡಿದ ಎಚ್.ಜಿ.ಜಗರೆಡ್ಡಿ, ನಗರಸಭೆ ಸ್ವಚ್ಚತೆಯೂ ಸೇರಿದಂತೆ ಹಲವಾರು ವಿಷಯಗಳಲ್ಲಿ ಉತ್ತಮ ಕೆಲಸ ಮಾಡುವ ಮೂಲಕ ನಾಗರೀಕರಿಗೆ ಸೌಲಭ್ಯಗಳನ್ನುಒದಗಿಸುತ್ತಾಬಂದಿದೆ.ಸ್ವಚ್ಛತೆಯೂ ಸೇರಿದಂತೆ ನಗರದ ಅಭಿವೃದ್ದಿಗೆ ಪ್ರೇರಕವಾದ ಮಾಹಿತಿ ಮತ್ತು ಸಲಹೆಯನ್ನು ಸದಸ್ಯರು ಸಭೆಗೆ ನೀಡಬೇಕು ಎಂದು ಮನವಿ ಮಾಡಿದರು.

ಹಿರಿಯ ಸದಸ್ಯ ಎಸ್.ಜಯಣ್ಣ, ವೆಂಕಟೇಶ್, ಸಿ.ಶ್ರೀನಿವಾಸ್, ವಿ.ವೈ.ಪ್ರಮೋದ್, ತಿಪ್ಪಕ್ಕ, ನಾಗಮಣಿ, ನಿರ್ಮಲ ಮುಂತಾದವರು ನಗರದ ಯಾವುದೇ ವಾರ್ಡ್‌ಗಳಲ್ಲಿ ನಿರೀಕ್ಷಿತ ಸ್ವಚ್ಛತೆ ಕಾಣುತ್ತಿಲ್ಲ, ಇತ್ತೀಚೆಗೆ ಮಳೆಬಂದ ಸಂದರ್ಭದಲ್ಲಿ ನೀರು ಹರಿದು ಸಾರ್ವಜನಿಕರು ತೊಂದರೆಗೀಡಾಗಿದ್ದಾರೆ. ಚರಂಡಿಗಳನ್ನು ಸ್ವಚ್ಛಗೊಳಿಸುವ ಕಾರ್ಯವಾಗುತ್ತಿಲ್ಲ, ನಗರದ ಕೇವಲ ಪ್ರಮುಖ ರಸ್ತೆಗಳನ್ನು ಮಾತ್ರ ಅಲ್ಪಸ್ವಲ್ಪ ಸ್ವಚ್ಛತೆ ಇದ್ದರೆ ಉಳಿದಂತೆ ಎಲ್ಲೆಡೆ ಸ್ವಚ್ಛತೆ ಮಾಯವಾಗಿದೆ. ಈ ನಿಟ್ಟಿನಲ್ಲಿ ಸೂಕ್ತ ನಿರ್ದೇಶನ ನೀಡುವಂತೆ ಮನವಿ ಮಾಡಿದರು. ಸದಸ್ಯ ವಿ.ವೈ.ಪ್ರಮೋದ್ ಬೀದಿನಾಯಿಗಳ ಉಪಟಳ ನಿಯಂತ್ರಿಸುವಂತೆ ಹಲವಾರು ಬಾರಿ ಮನವಿ ಮಾಡಲಾಗಿದೆ ಎಂದರು. ಸದಸ್ಯ ಶ್ರೀನಿವಾಸ್, ಶಾಂತಿನಗರದ ಸಾಯಿಚೇತನ ಶಾಲೆಗೆ ಈಗಾಗಲೇ ಕೆಲವು ನಿಬಂಧನೆಗಳ ಮೇಲೆ ಭೂಮಿ ಮಂಜೂರು ಮಾಡಿದ್ದು, ಸದರಿ ಶಾಲೆಯವರು ಪಾರ್ಕ್ ಜಾಗವನ್ನು ಒತ್ತುವರಿಯಾದ ಬಗ್ಗೆ ಸಾರ್ವಜನಿಕರು ಮಾಹಿತಿ ನೀಡಿದ್ದು ಈ ಬಗ್ಗೆ ಕ್ರಮಕೈಗೊಳ್ಳುವಂತೆ ತಿಳಿಸಿದರು. ಪಾವಗಡ ರಸ್ತೆಯಲ್ಲಿರುವ ಸ್ಮಶಾನದಲ್ಲಿ ಎಲ್ಲೂ ಅಂತ್ಯಸಂಸ್ಕಾರ ಮಾಡಲು ಜಾಗವಿಲ್ಲ, ಇದಕ್ಕೆ ಹೊಂದಿಕೊಂಡ ಖಾಸಗಿ ಜಮೀನನ್ನು ಖರೀದಿಸಿ ನೀಡುವಂತೆ ಒತ್ತಾಯಿಸಿದರು.



ಸದಸ್ಯರಾದ ಕೆ.ವೀರಭದ್ರಪ್ಪ, ಆರ್. ರುದ್ರನಾಯಕ, ಹೊಯ್ಸಳಗೋವಿಂದ, ಚಳ್ಳಕೆರೆಯಪ್ಪ, ಎಂ.ಜೆ.ರಾಘವೇಂದ್ರ, ವೈ.ಪ್ರಕಾಶ್, ಎಚ್.ಪ್ರಶಾಂತ್‌ಕುಮಾರ್, ಸುಮಭರಮಣ್ಣ, ಬಿ.ಟಿ.ರಮೇಶ್‌ಗೌಡ, ಆರ್. ಮಂಜುಳಾ, ಕವಿತಾವೀರೇಶ್, ಜಯಲಕ್ಷ್ಮಿ, ಶಿಲ್ಪಮುರುಳಿ, ಸುಜಾತ, ಕಂದಾಯಾಧಿಕಾರಿ ಸತೀಶ್, ಎಇಇ ವಿನಯ್, ಸಹಾಯಕ ಇಂಜಿನಿಯರ್ ಲೋಕೇಶ್, ಹಿರಿಯ ಆರೋಗ್ಯ ನಿರೀಕ್ಷಕ ಮಹಲಿಂಗಪ್ಪ, ಗಣೇಶ್, ರುದ್ರಮುನಿ ಮುಂತಾದವರು ಉಪಸ್ಥಿತರಿದ್ದರು.



ಕಾಗಳಗೆರೆ ಗ್ರಾಮದಲ್ಲಿ ನೂತನ ಸಿ.ಸಿ.ರಸ್ತೆ, ಚೆಕ್‌ಡ್ಯಾಂ, ಆಸ್ಪತ್ರೆ ನಿರ್ಮಾಣ ಕಟ್ಟಡ ಕಾಮುಗಾರಿಗೆ ಶಾಸಕ ಡಾ.ಎಂ. ಚಂದ್ರಪ್ಪನವರಿಂದ ಭೂಮಿ ಪೂಜೆ.

# ಅನಧಿಕೃತ ಗೈರು: ಇಬ್ಬರು ದ್ವಿತೀಯ ದರ್ಜೆ ಸಹಾಯಕರ ಅಮಾನತು

ಚಿತ್ರದುರ್ಗ: ಪದೇ ಪದೇ ಅನಧಿಕೃತ ಗೈರು ಹಾಜರಿ ಹಾಗೂ ಕರ್ತವ್ಯ ನಿರ್ಲಕ್ಷತೆ ತೋರಿದ ಕಾರಣಕ್ಕಾಗಿ ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ದ್ವಿತೀಯ ದರ್ಜೆ ಸಹಾಯಕ ಟಿ.ಎನ್.ವಿನಯ್ ಕುಮಾರ್ ಹಾಗೂ ಹೊಸದುರ್ಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್-2 ಕಚೇರಿಯ ದ್ವಿತೀಯ ದರ್ಜೆ ಸಹಾಯಕ ಎನ್.ರಂಗಸ್ವಾಮಿ ಅವರನ್ನು ಅಮಾನತುಗೊಳಿಸಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಆದೇಶಿಸಿದ್ದಾರೆ. ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ದ್ವಿತೀಯ ದರ್ಜೆ ಸಹಾಯಕ ಟಿ.ಎನ್.ವಿನಯ್ ಕುಮಾರ್ ಅವರು ರಜೆಯ ಅರ್ಜಿಯನ್ನು ಸಲ್ಲಿಸದೇ ಮೇಲಾಧಿಕಾರಿಗಳ ಅನುಮತಿಯನ್ನು ಪಡೆಯದೇ ಕಚೇರಿಗೆ ಅನಧಿಕೃತವಾಗಿ ಗೈರು ಹಾಜರಾಗಿ ಕಚೇರಿಯ ದೈನಂದಿನ ಕೆಲಸ ಕಾರ್ಯಗಳಿಗೆ ಅಡಚಣೆಯನ್ನುಂಟು ಮಾಡಿರುತ್ತಾರೆ. ಹೀಗಾಗಿ ಇವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವರದಿ ಸಲ್ಲಿಸಿರುತ್ತಾರೆ. ಇದರನ್ವ ದ್ವಿದಸ ಟಿ.ಎನ್.ವಿನಯ್ ಕುಮಾರ್ ಅವರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ, ತಕ್ಷಣದಿಂದಲೇ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿದ್ದಾರೆ.ಹೊಸದುರ್ಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ್-2) ಕಚೇರಿಯ ದ್ವಿತೀಯ ದರ್ಜೆ ಸಹಾಯಕ ಎನ್.ರಂಗಸ್ವಾಮಿ ಅವರು, ಹಲವು ಬಾರಿ ಕರ್ತವ್ಯಕ್ಕೆ ಮೇಲಾಧಿಕಾರಿಗಳ ಪೂರ್ವಾನುಮತಿ ಇಲ್ಲದೇ ಗೈರು ಹಾಜರಾಗುತ್ತಿದ್ದು, ಈ ಕುರಿತು ಹಲವಾರು ಬಾರಿ ಕಾರಣ ಕೇಳಿ ನೋಟಿಸ್‌ಗಳನ್ನು ನೀಡಲಾಗಿದ್ದರೂ ಸಹ ಸಮಂಜಸವಾದ ಉತ್ತರ ನೀಡದೆ ಕಳೆದ 2025ರ ಮೇ 14 ರಿಂದ ಜೂನ್ 10 ರವರೆಗೆ ಪೂರ್ವಾನುಮತಿ ಇಲ್ಲದೆ ಕರ್ತವ್ಯಕ್ಕೆ ಗೈರು ಹಾಜರಾಗಿರುತ್ತಾರೆ. ಹೀಗಾಗಿ ಇವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ವರದಿ ಸಲ್ಲಿಸಿರುತ್ತಾರೆ. ಇದರನ್ವಯ ಹೊಸದುರ್ಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ್-2) ಕಚೇರಿಯ ದ್ವಿದಸ ಎನ್.ರಂಗಸ್ವಾಮಿ ಅವರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ, ತಕ್ಷಣದಿಂದಲೇ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿದ್ದಾರೆ. ಅಮಾನತು ಅವಧಿಯಲ್ಲಿ ಪ್ರಾಧಿಕಾರದ ಅನುಮತಿ ಪಡೆಯದೇ ಕೇಂದ್ರಸ್ಥಾನ ಬಿಡುವಂತಿಲ್ಲ ಮತ್ತು ಅನ್ಯ ಉದ್ಯೋಗದಲ್ಲಿ ತೊಡಗುವಂತಿಲ್ಲ ಹಾಗೂ ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

## ಪ್ರಮುಖ ಸುದ್ದಿ

# ಶಾಲೆಗಳ ಒಟ್ಟಾರೆ ಬೆಳವಣಿಗೆಯಲ್ಲಿ ಎಲ್ಲರ ಪಾತ್ರ ಪ್ರಮುಖ

» ಚಿತ್ರದುರ್ಗ

ಮಾನಸಿಕ ಹಾಗೂ ದೈಹಿಕವಾಗಿ ಮಕ್ಕಳು ಆರೋಗ್ಯವಂತರಾಗಿರಬೇಕಾದರೆ ದೈಹಿಕ ಶಿಕ್ಷಣ ಶಿಕ್ಷಕರ ಪಾತ್ರ ತುಂಬಾ ಮುಖ್ಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಕರೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ವಾಸವಿ ಶಾಲೆಯಲ್ಲಿ ಬುಧವಾರ ನಡೆದ ತಾಲ್ಲೂಕು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರ ಸಭೆ ಉದ್ಘಾಟಿಸಿ ಮಾತನಾಡಿದರು.

ಶಾಲೆಗಳ ಒಟ್ಟಾರೆ ಬೆಳವಣಿಗೆಯಲ್ಲಿ ಎಲ್ಲರ ಪಾತ್ರ ಪ್ರಮುಖವಾದುದು. ಶಿಕ್ಷಣದ ಜೊತೆ ಮಕ್ಕಳಿಗೆ ಶಿಸ್ತು, ಸಂಸ್ಕಾರ ಕಲಿಸುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ. ಪ್ರಾಯೋಗಿಕ ಹಾಗೂ ಬೋಧನಾ ರೂಪದಲ್ಲಿ ದೈಹಿಕ ಶಿಕ್ಷಣವನ್ನು ಮಕ್ಕಳಿಗೆ ಕಲಿಸಲು ಇಲಾಖೆ ಅವಕಾಶ ಕೊಟ್ಟಿದೆ. ಜೂ.ನಿಂದ ಹಿಡಿದು ಮಾ.ವರೆಗೆ ಏನೇನು ಕಾರ್ಯಚಟುವಟಿಕೆ ರೂಪಿಸಬೇಕೆನ್ನುವ ವಿವರ ಕ್ಯಾಲೆಂಡರ್‌ನಲ್ಲಿದೆ. ದೈಹಿಕ ಶಿಕ್ಷಣವೆಂದರೆ ನಿರ್ಲಕ್ಷ್ಯದಿಂದ ನೋಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಕಡಿಮೆಯಾಗುತ್ತಿದೆ. ಈ ನಿಟ್ಟಿನಲ್ಲಿ ಶಿಕ್ಷಕರು ಪ್ರಾಮಾಣಿಕ ಹಾಗೂ ವಸ್ತುನಿಷ್ಟವಾಗಿ ಕೆಲಸ ಮಾಡಬೇಕು. ಮುಖ್ಯ ಶಿಕ್ಷಕರು ದೈಹಿಕ ಶಿಕ್ಷಕರುಗಳ ಚಟುವಟಿಕೆಗಳನ್ನು ತಿಳಿದುಕೊಂಡಿರಬೇಕೆಂದು ಹೇಳಿದರು.



ನಿಗಧಿತ ದಿನಾಂಕ ಮತ್ತು ವೇಳಾಪಟ್ಟಿ ಪ್ರಕಾರ ಕೆಲಸ ಮಾಡಿದರೆ ಬೌದ್ಧಿಕ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಲಿದೆ. ಈ ನಿಟ್ಟಿನಲ್ಲಿ ಸರ್ವಾಂಗೀಣ ಚಟುವಟಿಕೆಗೆ ಎಲ್ಲರೂ ಕೈಜೋಡಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮನವಿ ಮಾಡಿದರು.

ವಾಸವಿ ವಿದ್ಯಾಸಂಸ್ಥೆ ಕಾರ್ಯದರ್ಶಿ ಅಜಯ್‌ಕುಮಾರ್ ಮಾತನಾಡಿ ತರಗತಿಯಲ್ಲಿ ವಾತಾವರಣ ಸ್ವಚ್ಛಂದವಾಗಿರಬೇಕಾದರೆ ಶಿಕ್ಷಕರುಗಳು ಮಕ್ಕಳ ಮನಸ್ಸನ್ನು ಪಾಠದ ಕಡೆಗೆ ಸೆಳೆದು ಸ್ಫೂರ್ತಿಯ ಚಿಲುಮೆಯನ್ನಾಗಿಸಬೇಕು. ಕ್ರೀಡೆಯಲ್ಲಿ ಆಸಕ್ತಿಯಿರುವ ಮಕ್ಕಳನ್ನು ಗುರುತಿಸಿ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟಗಳಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸುವ ಜವಾಬ್ದಾರಿ ದೈಹಿಕ ಶಿಕ್ಷಕರು ಹಾಗೂ ಪೋಷಕರುಗಳ ಮೇಲಿದೆ ಎಂದರು.ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಚಿದಾನಂದಸ್ವಾಮಿ ಮಾತನಾಡಿ 46 ಅಂಶಗಳಿರುವ ಕ್ರೀಡಾ ಚೇತನ ಕ್ಯಾಲೆಂಡರ್ ಬಿಡುಗಡೆಗೊಳಿಸಲಾಗಿದೆ. ಇದರಲ್ಲಿ ದೈಹಿಕ ಶಿಕ್ಷಣ ಮುಂದೆ ಕಷ್ಟವಾಗಲಿದೆ ಎನ್ನುವುದು ಗೊತ್ತಾಗಲಿ ಎನ್ನುವ ಕಾರಣಕ್ಕಾಗಿ ಕ್ಯಾಲೆಂಡರ್ ಹೊರತರಲಾಗಿದೆ. ಪ್ರತಿ ಶಾಲೆಗಳಲ್ಲಿಯೂ 46 ಅಂಶಗಳನ್ನು ಅನುಷ್ಟಾನಗೊಳಿಸಬೇಕು. ಮಕ್ಕಳಲ್ಲಿ ವಿಶೇಷ ಚೈತನ್ಯ ಮೂಡಿಸುವುದಕ್ಕಾಗಿ ಜಿಲ್ಲೆಯಲ್ಲಿರುವ ಒಂದು ಸಾವಿರ ಶಾಲೆಗಳಿಗೆ ಕ್ಯಾಲೆಂಡರ್ ತಲುಪಬೇಕೆಂದು ಸೂಚಿಸಿದರು.

ದೈಹಿಕ ಶಿಕ್ಷಕರ ಸಂಘದ ಕಾರ್ಯದರ್ಶಿ ಕಲ್ಲೇಶ್ ಮೌರ್ಯ ಮಾತನಾಡುತ್ತ ವಿಶೇಷ ಶಿಕ್ಷಕರನ್ನು ಉಳಿಸಲು ಹೆಚ್ಚುವರಿ ಶಿಕ್ಷಕರುಗಳನ್ನು ವರ್ಗಾವಣೆ ಮಾಡುವುದು ಸರಿಯಲ್ಲ. 2008 ರಲ್ಲಿ ಪಠ್ಯಪುಸ್ತಕ ಕೊಟ್ಟರು ದೈಹಿಕ ಶಿಕ್ಷಕರುಗಳ ನೇಮಕಾತಿಯಾಗಿಲ್ಲ. ದೈಹಿಕ ಶಿಕ್ಷಕರುಗಳಿಗೆ ನಾನಾ ರೀತಿಯ ಸಮಸ್ಯೆಗಳಿವೆ ಸರ್ಕಾರ ಗಮನ ಹರಿಸಬೇಕಿದೆ ಎಂದು ವಿನಂತಿಸಿದರು.

ಟಿ.ಪಿ.ಇ.ಓ. ಬಿ.ಎಂ.ಚನ್ನಬಸಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು.

ವಾಸವಿ ವಿದ್ಯಾಸಂಸ್ಥೆ ಮುಖ್ಯ ಶಿಕ್ಷಕ ಅಶೋಕ್, ವ್ಯವಸ್ಥಾಪಕ ಗೋಪಾಲಕೃಷ್ಣ, ದೈಹಿಕ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷೆ ಲತ ಇವರುಗಳು ವೇದಿಕೆಯಲ್ಲಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T